








ಸಂಪುಟ: Vol: 04 | ಸಂಚಿಕೆ: Issue: 109 | ರಾಯಚೂರು Raichur | 11-10-2026 | ಭಾನುವಾರ Sunday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com



ಸಂಪಾದಕರು : ಗುರುರಾಜ ಕೆ
Editor: Gururaja K 98863 85685


# ಉಪ ಚುನಾವಣಾ ಆಯುಕ್ತರಾಗಿ ಪ್ರಕಾಶ್ ರಾಜ್‌ಪುರೋಹಿತ್ ನೇಮಕ: 27 ಹಿರಿಯ ಅಧಿಕಾರಿಗಳಿಗೆ ಹೊಸ ಜವಾಬ್ದಾರಿ

ನವದೆಹಲಿ: ಕೇಂದ್ರ ಸರ್ಕಾರದ ಆಡಳಿತಾತ್ಮಕ ಪುನರ್‌ವ್ಯವಸ್ಥೆಯ ಭಾಗವಾಗಿ ಹಿರಿಯ ಐಎಎಸ್ ಅಧಿಕಾರಿ ಪ್ರಕಾಶ್ ರಾಜ್‌ಪುರೋಹಿತ್ ಅವರನ್ನು ಭಾರತೀಯ ಚುನಾವಣಾ ಆಯೋಗದ ಉಪ ಚುನಾವಣಾ ಆಯುಕ್ತರನ್ನಾಗಿ ನೇಮಕ ಮಾಡಲಾಗಿದೆ. ಇದರೊಂದಿಗೆ ವಿವಿಧ ಕೇಂದ್ರ ಸಚಿವಾಲಯಗಳು ಹಾಗೂ ಇಲಾಖೆಗಳಲ್ಲಿ ಜಂಟಿ ಕಾರ್ಯದರ್ಶಿ ಮತ್ತು ಅದಕ್ಕೆ ಸಮಾನವಾದ ಹುದ್ದೆಗಳಿಗೆ 27 ಹಿರಿಯ ಅಧಿಕಾರಿಗಳನ್ನು ನಿಯೋಜಿಸಲಾಗಿದೆ.

ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಪ್ರಕ್ರಿಯೆಯನ್ನು ವಿರೋಧಿಸಿ ಪ್ರತಿಪಕ್ಷಗಳು ಚುನಾವಣಾ ಆಯೋಗದ ವಿರುದ್ಧ ಪ್ರತಿಭಟನೆ ನಡೆಸುತ್ತಿರುವ ಸಂದರ್ಭದಲ್ಲಿಯೇ ಈ ನೇಮಕಾತಿ ಆದೇಶ ಹೊರಬಿದ್ದಿದೆ.




ರಾಜಸ್ಥಾನ ಕೇಡರ್‌ನ 2010ನೇ ಬ್ಯಾಚ್‌ನ ಐಎಎಸ್ ಅಧಿಕಾರಿಯಾಗಿರುವ ಪ್ರಕಾಶ್ ರಾಜ್‌ಪುರೋಹಿತ್ ಅವರು ಪ್ರಸ್ತುತ ಉಪ ಚುನಾವಣಾ ಆಯುಕ್ತರಾಗಿರುವ ಸಂಜಯ್ ಕುಮಾರ್ ಅವರ ಸ್ಥಾನವನ್ನು ವಹಿಸಿಕೊಳ್ಳಲಿದ್ದಾರೆ. ಕೇಂದ್ರ ಸಿಬ್ಬಂದಿ ಸಚಿವಾಲಯ ಹೊರಡಿಸಿರುವ ಆದೇಶದಂತೆ ಅವರು 2030ರ ಏಪ್ರಿಲ್ 8ರವರೆಗೆ ಈ ಹುದ್ದೆಯಲ್ಲಿ ಕಾರ್ಯನಿರ್ವಹಿಸಲಿದ್ದಾರೆ.

ಕೇಂದ್ರ ಸಚಿವ ಸಂಪುಟದ ನೇಮಕಾತಿ ಸಮಿತಿ ವಿವಿಧ ಇಲಾಖೆಗಳ ಉನ್ನತ ಹುದ್ದೆಗಳಿಗೆ ಅಧಿಕಾರಿಗಳ ನೇಮಕಾತಿಯನ್ನು ಅನುಮೋದಿಸಿದೆ. ಅದರಂತೆ 1996ನೇ ಬ್ಯಾಚ್‌ನ ಭಾರತೀಯ ಟೆಲಿಕಾಂ ಸೇವೆಯ ಅಧಿಕಾರಿ ವಿವೇಕ್ ಖರೆ ಅವರನ್ನು ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯ (ಎನ್‌ಟಿಎ) ಜಂಟಿ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದೆ.

ಕೇಂದ್ರ ಗೃಹ ಸಚಿವಾಲಯದ ಜಂಟಿ ಕಾರ್ಯದರ್ಶಿಗಳಾಗಿ ರವಿಶಂಕರ್, ಚಿತ್ತರಂಜನ್ ದಾಶ್, ಪಿ. ಮನೋಜ್ ಕುಮಾರ್ ಹಾಗೂ ಅಭಿಷೇಕ್ ಭಗೋಟಿಯಾ ಅವರನ್ನು ನಿಯೋಜಿಸಲಾಗಿದೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಂಟಿ ಕಾರ್ಯದರ್ಶಿಗಳಾಗಿ ಮೊಹಮ್ಮದ್ ವೈ. ಸಫೀರುಲ್ಲಾ ಕೆ. ಮತ್ತು ರಿತು ಶರ್ಮಾ ನೇಮಕಗೊಂಡಿದ್ದಾರೆ.

ಅಸ್ಸಾಂ–ಮೇಘಾಲಯ ಕೇಡರ್‌ನ 2009ನೇ ಬ್ಯಾಚ್‌ನ ಐಎಎಸ್ ಅಧಿಕಾರಿ ವರ್ಣಾಲಿ 2ನೇ ಪುಟಕ್ಕೆ

# ಪಿಡಬ್ಲ್ಯೂಡಿ ಕಚೇರಿಯಲ್ಲಿ ನಿಗೂಢ ಗೊಂಬೆ ಪತ್ತೆ: ಸಿಬ್ಬಂದಿಯಲ್ಲಿ ಆತಂಕ

ರಾಯಚೂರು, ಅ.10: ನಗರದ ಲೋಕೋಪಯೋಗಿ ಇಲಾಖೆ (ಪಿಡಬ್ಲ್ಯೂಡಿ) ಕಚೇರಿಯ ಮೇಲ್ಭಾಗದಲ್ಲಿರುವ ಹುಣಸೆ ಮರಕ್ಕೆ ವಾಮಾಚಾರ ನಡೆಸಿರುವ ಶಂಕೆ ಮೂಡಿಸುವ ರೀತಿಯಲ್ಲಿ ಗೊಂಬೆಯೊಂದನ್ನು ಕಟ್ಟಿರುವ ಘಟನೆ ಬೆಳಕಿಗೆ ಬಂದಿದ್ದು, ಕಚೇರಿ ಸಿಬ್ಬಂದಿಯಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದೆ. ಕಾಮಗಾರಿಗಳ ಬಿಲ್ ಪಾವತಿ ವಿಳಂಬದಿಂದ ಅಸಮಾಧಾನಗೊಂಡಿರುವ ಗುತ್ತಿಗೆದಾರರು ಈ ಕೃತ್ಯ ಎಸಗಿರಬಹುದೇ ಎಂಬ ಅನುಮಾನವೂ ವ್ಯಕ್ತವಾಗಿದ್ದು, ಪ್ರಕರಣ ಸಾರ್ವಜನಿಕ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ರಾಯಚೂರು ನಗರ ಹಾಗೂ ಗ್ರಾಮೀಣ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಗೆ ಸಂಬಂಧಿಸಿದ ಲೋಕೋಪಯೋಗಿ ಇಲಾಖೆಯ ಕಚೇರಿಯಲ್ಲಿ ಈ ಘಟನೆ ನಡೆದಿದೆ. ಸಹಾಯಕ ಕಾರ್ಯಪಾಲಕ ಎಂಜಿನಿಯರ್ (ಎಇಇ) ಮಹೇಶ್ ಕುಮಾರ್ ಅವರ




ಕಚೇರಿಯ ಮೇಲ್ಭಾಗದಲ್ಲಿರುವ ಹುಣಸೆ ಮರಕ್ಕೆ ಗಂಡಿನ ಆಕೃತಿಯ ಗೊಂಬೆಯನ್ನು ಕಟ್ಟಿರುವುದು ಪತ್ತೆಯಾಗಿದೆ. ಗೊಂಬೆಗೆ ಅರಿಶಿಣ, ಕುಂಕುಮ ಹಾಗೂ ವಿಭೂತಿ ಹಚ್ಚಿ, ಕಪ್ಪು ದಾರಗಳಿಂದ ಸುತ್ತಲಾಗಿದ್ದು, 2ನೇ ಪುಟಕ್ಕೆ

# ಗಾಣೇಕಲ್ ಜಲಾಶಯದಿಂದ ನೀರು ಬಿಡುಗಡೆ: ಕುಡಿಯುವ ನೀರು, ಕೃಷಿಗೆ ಮೊದಲ ಆದ್ಯತೆ: ಶಾಸಕ ಬಸನಗೌಡ ದದ್ದಲ್

ರಾಯಚೂರು: ಸಾರ್ವಜನಿಕರ ಕುಡಿಯುವ ನೀರಿನ ಅಗತ್ಯತೆ ಪೂರೈಸುವುದರ ಜೊತೆಗೆ ರೈತರ ಕೃಷಿ ಚಟುವಟಿಕೆಗಳಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ಗಾಣೇಕಲ್ ಜಲಾಶಯದಿಂದ ಕಾಲುವೆಗಳಿಗೆ ನೀರು ಹರಿಸಲಾಗುತ್ತಿದೆ ಎಂದು ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ತಿಳಿಸಿದರು.

ಗಾಣೇಕಲ್ ಜಲಾಶಯದಿಂದ 99ಎ, 100, 102 ಹಾಗೂ 102ಎ ಕಾಲುವೆಗಳ ಮೂಲಕ ನೀರು ಬಿಡುಗಡೆ ಮಾಡಲಾಗಿದ್ದು, ರಾಯಚೂರು ನಗರದ ಕೆಳಭಾಗದ ಪ್ರದೇಶಗಳಿಗೆ ಕುಡಿಯುವ ನೀರು ಒದಗಿಸುವುದರೊಂದಿಗೆ ಕಾಲುವೆ ವ್ಯಾಪ್ತಿಯ ರೈತರ ಬೆಳೆಗಳಿಗೂ ನೀರಾವರಿ ಸೌಲಭ್ಯ ದೊರೆಯಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ನೀರು ಪೂರೈಕೆ



ಹಾಗೂ ಕಾಲುವೆಗಳ ನಿರ್ವಹಣೆ ಕುರಿತು ಚರ್ಚಿಸಿದ ಶಾಸಕರು, ಜಲಾಶಯದಿಂದ ಬಿಡುಗಡೆಯಾಗುವ ನೀರು ನಿಗದಿತ ಪ್ರದೇಶಗಳಿಗೆ ಸಮರ್ಪಕವಾಗಿ ತಲುಪುವಂತೆ ಕ್ರಮ ಕೈಗೊಳ್ಳಬೇಕು. ನೀರಿನ ಹರಿವಿನ ಮೇಲೆ ನಿರಂತರ ನಿಗಾ ಇರಿಸುವುದರ ಜೊತೆಗೆ ಅನಗತ್ಯ ಪೋಲು ತಡೆಗಟ್ಟಲು ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು.

ಕುಡಿಯುವ ನೀರಿನ ವಿತರಣೆಯಲ್ಲಿ ಯಾವುದೇ ಅಡಚಣೆ ಉಂಟಾಗದಂತೆ ಅಧಿಕಾರಿಗಳು 2ನೇ ಪುಟಕ್ಕೆ

# ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ: ರಾಯಚೂರಿನಲ್ಲಿ ಕಾಂಗ್ರೆಸ್ ಮುಖಂಡರ ಸಭೆ

ರಾಯಚೂರು, ಅ.10: ಮುಂಬರುವ ಅಕ್ಟೋಬರ್ 23ರಂದು ನಡೆಯಲಿರುವ ಈಶಾನ್ಯ ಶಿಕ್ಷಕರ ಮತಕ್ಷೇತ್ರದ ಚುನಾವಣೆಯ ಹಿನ್ನೆಲೆಯಲ್ಲಿ ನಗರದ ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯದಲ್ಲಿ ಶನಿವಾರ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರ ಸಭೆ ನಡೆಯಿತು. ಚುನಾವಣಾ ಸಿದ್ಧತೆ, ಶಿಕ್ಷಕ ಮತದಾರರ ಸಂಪರ್ಕ ಹಾಗೂ ಪಕ್ಷದ ಸಂಘಟನಾತ್ಮಕ ಚಟುವಟಿಕೆಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ಮಾತನಾಡಿದ ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು, ಈಶಾನ್ಯ ಶಿಕ್ಷಕರ ಕ್ಷೇತ್ರವು ಕಾಂಗ್ರೆಸ್ ಪಕ್ಷದ ಪ್ರಮುಖ ನೆಲೆಯಾಗಿದ್ದು, ಮುಂಬರುವ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಯ ಗೆಲುವಿಗೆ ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸಬೇಕು. ಕಾರ್ಯಕರ್ತರು ಶಿಕ್ಷಕ ಮತದಾರರನ್ನು ವೈಯಕ್ತಿಕವಾಗಿ ಭೇಟಿಯಾಗಿ ಕಾಂಗ್ರೆಸ್ ಸರ್ಕಾರದ ಸಾಧನೆಗಳು ಹಾಗೂ ಶಿಕ್ಷಕರಿಗಾಗಿ ಕೈಗೊಂಡಿರುವ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಬೇಕು ಎಂದು ತಿಳಿಸಿದರು.




ಕೆಪಿಸಿಸಿ ಕಾರ್ಯಾಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ ಮಾತನಾಡಿ, ಪ್ರತಿ ಬ್ಲಾಕ್ ವ್ಯಾಪ್ತಿಯ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಶಾಲಾ-ಕಾಲೇಜುಗಳ ಶಿಕ್ಷಕರನ್ನು ಸಂಪರ್ಕಿಸಬೇಕು. ಶಿಕ್ಷಕರ ಸಮಸ್ಯೆಗಳು, ಅವರ ಬೇಡಿಕೆಗಳು ಹಾಗೂ ಸರ್ಕಾರದ ಯೋಜನೆಗಳ ಕುರಿತು ಚರ್ಚಿಸಿ ಪಕ್ಷದ ನಿಲುವುಗಳನ್ನು ತಿಳಿಸಬೇಕು ಎಂದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ. ಶಾಂತಪ್ಪ ಮಾತನಾಡಿ, ಚುನಾವಣೆಯಲ್ಲಿ ಶಿಕ್ಷಕ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡುವಂತೆ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ. ಮತದಾನದ ವಿಧಾನ ಹಾಗೂ ಪ್ರಕ್ರಿಯೆಯ ಕುರಿತು ಶಿಕ್ಷಕರಿಗೆ ಸಮರ್ಪಕ ಮಾಹಿತಿ ನೀಡಬೇಕು. ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರು ತಮ್ಮ ವ್ಯಾಪ್ತಿಯಲ್ಲಿ ಸಂಘಟಿತವಾಗಿ ಕೆಲಸ ಮಾಡಬೇಕು ಎಂದು ಹೇಳಿದರು.

ಈಶಾನ್ಯ ಶಿಕ್ಷಕರ ಮತಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಮಾತನಾಡಿ, ಶಿಕ್ಷಕರ ಕ್ಷೇತ್ರವು ಶೈಕ್ಷಣಿಕ ಸಮುದಾಯದ ಸಮಸ್ಯೆಗಳಿಗೆ ಧ್ವನಿಯಾಗುವ ಮಹತ್ವದ ವೇದಿಕೆಯಾಗಿದೆ. ಶಿಕ್ಷಕರು ಎದುರಿಸುತ್ತಿರುವ ವೇತನ ತಾರತಮ್ಯ, ಹಳೆಯ ಪಿಂಚಣಿ ಯೋಜನೆ ಜಾರಿ, ಅನುದಾನರಹಿತ 2ನೇ ಪುಟಕ್ಕೆ

# ಶ್ರೀ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನದಲ್ಲಿ ಅ.11ರಿಂದ 55ನೇ ನವರಾತ್ರಿ ಉತ್ಸವ

ರಾಯಚೂರು, ಅ.10: ನಗರದ ಉಪ್ಪಾರವಾಡಿ ಬ್ರೇಸ್ತವಾರಪೇಟೆಯ ಶ್ರೀ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನದಲ್ಲಿ ಅಕ್ಟೋಬರ್ 11ರಿಂದ 20ರವರೆಗೆ 55ನೇ ವರ್ಷದ ನವರಾತ್ರಿ ಉತ್ಸವವನ್ನು ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಹಾಗೂ ವಿಶೇಷ ವಾಹನೋತ್ಸವಗಳೊಂದಿಗೆ ವಿಜೃಂಭಣೆಯಿಂದ ಆಚರಿಸಲಾಗುವುದು ಎಂದು ದೇವಸ್ಥಾನದ ಪೂಜಾರಿ ಕಂಠಾಚಾರಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶ್ರೀ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನ ಸಮಿತಿ ವತಿಯಿಂದ ಹತ್ತು ದಿನಗಳ ಕಾಲ ಪ್ರತಿದಿನ ದೇವರಿಗೆ ವಿಶೇಷ ಪೂಜೆ, ಅಲಂಕಾರ ಹಾಗೂ ವಿವಿಧ ವಾಹನೋತ್ಸವಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಅ.11ರಂದು ಸೂರ್ಯ ವಾಹನ, ಅ.12ರಂದು ಆದಿಶೇಷ ವಾಹನ, ಅ.13ರಂದು ಸಿಂಹ ವಾಹನ, ಅ.14ರಂದು ಚಂದ್ರ ವಾಹನ,



ಅ.15ರಂದು ಕಾಮಧೇನು ಕಲ್ಪವೃಕ್ಷ ವಾಹನ, ಅ.16ರಂದು ಗರುಡ ವಾಹನ, ಅ.17ರಂದು ಆಂಜನೇಯ ವಾಹನ, ಅ.18ರಂದು ಗಜ ವಾಹನ ಹಾಗೂ ಅ.19ರಂದು ಅಶ್ವ ವಾಹನೋತ್ಸವ ನಡೆಯಲಿದೆ ಎಂದು ವಿವರಿಸಿದರು.

ಅಕ್ಟೋಬರ್ 15ರಂದು ಮಧ್ಯಾಹ್ನ 1 ಗಂಟೆಯಿಂದ ಸಾರ್ವಜನಿಕ ಅನ್ನಸಂತರ್ಪಣೆ ನಡೆಯಲಿದ್ದು, ಸಂಜೆ 6 ಗಂಟೆಗೆ ದೀಪೋತ್ಸವ ಆಯೋಜಿಸಲಾಗಿದೆ. ಅ.18ರಂದು ಸಂಜೆ 6 ಗಂಟೆಗೆ ಉಯ್ಯಾಲೆ ಉತ್ಸವ ಹಾಗೂ ಅ.19ರಂದು ಸಂಜೆ 6 ಗಂಟೆಗೆ ರಥೋತ್ಸವ ಜರುಗಲಿದೆ. ಅ.20ರಂದು ಶ್ರೀನಿವಾಸ ಕಲ್ಯಾಣೋತ್ಸವದೊಂದಿಗೆ ನವರಾತ್ರಿ ಉತ್ಸವ ಸಮಾರೋಪಗೊಳ್ಳಲಿದೆ ಎಂದು ತಿಳಿಸಿದರು.

ವಿಶೇಷವಾಗಿ, ಅಶ್ವ ಸಪ್ತಮಿ ರಥ ಮಹೋತ್ಸವದ ಪ್ರಯುಕ್ತ ಭಕ್ತರಿಗೆ ವಿಶೇಷ ಸೇವಾ ಅವಕಾಶ ಕಲ್ಪಿಸಲಾಗಿದೆ. ಭಜಿಯ 1008 ಕಮಲ ಹೂವುಗಳಿಂದ ಮಹಾರ್ಚನೆ ಹಾಗೂ ಪಂಚಾಮೃತ ಅಭಿಷೇಕ ಸೇರಿದಂತೆ ವಿವಿಧ ಪೂಜಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಅಕ್ಟೋಬರ್ 11ರಿಂದ ಪ್ರತಿದಿನ ಬೆಳಿಗ್ಗೆ 11 ಗಂಟೆಗೆ ವಿಶೇಷ ಪೂಜೆ ನಡೆಯಲಿದ್ದು, ಒಂದು ದಿನದ ಪೂಜಾ ಸೇವೆಗೆ ₹2,100 ನಿಗದಿಪಡಿಸಲಾಗಿದೆ. ಭಕ್ತರು ಮುಂಚಿತವಾಗಿ ಹೆಸರು ನೋಂದಾಯಿಸಿಕೊಂಡು ಈ ಧಾರ್ಮಿಕ ಸೇವೆಗಳಲ್ಲಿ 2ನೇ ಪುಟಕ್ಕೆ

# ಮಗನ ನಿಗೂಢ ಸಾವಿನ ಸತ್ಯಕ್ಕಾಗಿ ತಾಯಿಯ ನ್ಯಾಯದ ಹೋರಾಟ

ರಾಯಚೂರು, ಅ.10: ದೇವದುರ್ಗ ತಾಲೂಕಿನ ಅಡಕಲಗುಡ್ಡ ಗ್ರಾಮದ 15 ವರ್ಷದ ಬಾಲಕ ಶಂಕರಗೌಡ ಅನುಮಾನಾಸ್ಪದವಾಗಿ ಮೃತಪಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ಸಾವಿನ ಹಿಂದಿನ ನೈಜ ಕಾರಣವನ್ನು ಪತ್ತೆಹಚ್ಚಿ ನ್ಯಾಯ ಒದಗಿಸಬೇಕೆಂದು ಮೃತ ಬಾಲಕನ ತಾಯಿ ಉಮಾದೇವಿ ಒತ್ತಾಯಿಸಿದ್ದಾರೆ. ಪ್ರಕರಣ ನಡೆದು ಹತ್ತು ತಿಂಗಳು ಕಳೆದರೂ ಸಮರ್ಪಕ ತನಿಖೆ ನಡೆದಿಲ್ಲ. ಸಂಬಂಧಪಟ್ಟ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಿದರೂ ನ್ಯಾಯ ದೊರಕಿಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2025ರ ಡಿಸೆಂಬರ್ 2ರಂದು ತಮ್ಮ ಮಗ ಶಂಕರಗೌಡ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದ. ಮಗ ಆತ್ಮಹತ್ಯೆ ಮಾಡಿಕೊಳ್ಳುವಂತಹ ಯಾವುದೇ ಸಮಸ್ಯೆ ಎದುರಿಸುತ್ತಿರಲಿಲ್ಲ. ಹೀಗಾಗಿ ಆತನ ಸಾವಿನ ಹಿಂದೆ ಬೇರೆ ಕಾರಣಗಳಿರುವ ಸಾಧ್ಯತೆಯಿದ್ದು, ಈ ಬಗ್ಗೆ ನಿಷ್ಪಕ್ಷಪಾತ ತನಿಖೆ ನಡೆಸುವ ಅಗತ್ಯವಿದೆ



ಎಂದು ಹೇಳಿದರು.

ಕುಟುಂಬದ ಆಸ್ತಿ ವಿಚಾರವೇ ಮಗನ ಸಾವಿಗೆ ಕಾರಣವಾಗಿರಬಹುದು ಎಂಬ ಅನುಮಾನ ವ್ಯಕ್ತಪಡಿಸಿದ ಅವರು, ತಮ್ಮ ಸಂಬಂಧಿಕರಾದ ಮಂಜುನಾಥ, ಶಂಕರ್, ಹೊಸಮನಿ ಮಲ್ಲಪ್ಪ ಹಾಗೂ ಅವರ ಸಹೋದರರ ಪಾತ್ರದ ಬಗ್ಗೆ ಶಂಕೆಯಿದೆ ಎಂದು ಆರೋಪಿಸಿದರು. ಆಸ್ತಿ ತಮ್ಮ ವಶಕ್ಕೆ ಪಡೆಯುವ ಉದ್ದೇಶದಿಂದ ಮಗನನ್ನು ಕೊಲೆ ಮಾಡಿರುವ ಸಾಧ್ಯತೆಯನ್ನು ತಳ್ಳಿಹಾಕುವಂತಿಲ್ಲ. ಈ ಎಲ್ಲ ಅನುಮಾನಗಳನ್ನು ತನಿಖೆಯ ಮೂಲಕ ನಿವಾರಿಸಬೇಕೆಂದು ಆಗ್ರಹಿಸಿದರು.

ಘಟನೆಯ ಕುರಿತು ಜಾಲಹಳ್ಳಿ ಪೊಲೀಸ್ ಠಾಣೆ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ದೂರು ಸಲ್ಲಿಸಿದ್ದರೂ, ಪೊಲೀಸರು ಅಸಹಜ ಸಾವು ಪ್ರಕರಣ (ಯುಡಿಆರ್) ದಾಖಲಿಸುವುದಕ್ಕೆ ಮಾತ್ರ ಸೀಮಿತರಾಗಿದ್ದಾರೆ. ತಮ್ಮ ದೂರಿನ ಆಧಾರದಲ್ಲಿ ಎಫ್‌ಐಆರ್ ದಾಖಲಿಸಿ ಸಮಗ್ರ ತನಿಖೆ ಕೈಗೊಂಡಿಲ್ಲ ಎಂದು ದೂರಿದರು.

ದೇವದುರ್ಗ ಕ್ಷೇತ್ರದ ಶಾಸಕಿ ಕರೆಮ್ಮ ಜಿ. ನಾಯಕ ಹಾಗೂ ಕೆಲವು ಸ್ಥಳೀಯ ಪ್ರಭಾವಿ ಮುಖಂಡರ ಬೆಂಬಲ ಶಂಕಿತರಿಗೆ ಇರುವುದರಿಂದ ಪ್ರಕರಣದ ತನಿಖೆ ನಿರೀಕ್ಷಿತ ರೀತಿಯಲ್ಲಿ ನಡೆಯುತ್ತಿಲ್ಲ ಎಂಬ ಅನುಮಾನವಿದೆ ಎಂದು ಉಮಾದೇವಿ ಆರೋಪಿಸಿದರು. ರಾಜಕೀಯ ಪ್ರಭಾವದಿಂದ ತನಿಖೆಗೆ ಅಡ್ಡಿಯಾಗುತ್ತಿದೆಯೇ ಎಂಬುದನ್ನು ಪರಿಶೀಲಿಸಬೇಕು. ಬಡ ಕುಟುಂಬದವರ ದೂರುಗಳಿಗೂ ಪೊಲೀಸರು 2ನೇ ಪುಟಕ್ಕೆ

# ವಿಶೇಷಚೇತನರ ಬಾಕಿ ಮಾಸಾಶನ ಬಿಡುಗಡೆಗೆ ಆಗ್ರಹಿಸಿ ಅ.15ರಂದು ವಿಧಾನಸೌಧದವರೆಗೆ ಬೃಹತ್ ಪಾದಯಾತ್ರೆ

ರಾಯಚೂರು, ಅ.10: ಕಳೆದ ಏಳು ತಿಂಗಳಿಂದ ಬಾಕಿ ಉಳಿದಿರುವ ವಿಶೇಷಚೇತನರ ಮಾಸಾಶನವನ್ನು ಕೂಡಲೇ ಬಿಡುಗಡೆ ಮಾಡಬೇಕು ಹಾಗೂ ಎಂಆರ್‌ಡಬ್ಲ್ಯೂ, ವಿಆರ್‌ಡಬ್ಲ್ಯೂ ಮತ್ತು ಯುಆರ್‌ಡಬ್ಲ್ಯೂ ಕಾರ್ಯಕರ್ತರ ಸೇವೆಯನ್ನು ಕಾಯಂಗೊಳಿಸಿ ಕನಿಷ್ಠ ವೇತನ ಜಾರಿಗೊಳಿಸಬೇಕು ಎಂದು ಆಗ್ರಹಿಸಿ ಅಕ್ಟೋಬರ್ 15ರಂದು ರಾಮನಗರದಿಂದ ಬೆಂಗಳೂರು ವಿಧಾನಸೌಧದವರೆಗೆ ಬೃಹತ್ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ನವ ಕರ್ನಾಟಕ ಎಂಆರ್‌ಡಬ್ಲ್ಯೂ, ವಿಆರ್‌ಡಬ್ಲ್ಯೂ, ಯುಆರ್‌ಡಬ್ಲ್ಯೂ ವಿಕಲಚೇತನರ ಗೌರವಧನ ಕಾರ್ಯಕರ್ತರ ಸಂಘದ ರಾಯಚೂರು ಜಿಲ್ಲಾಧ್ಯಕ್ಷ ಮಹ್ಮದ್ ಹುಸೇನ್‌ಸಾಬ ಪರಾಪೂರ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯಾದ್ಯಂತ ವಿಶೇಷಚೇತನರ ಕಲ್ಯಾಣಕ್ಕಾಗಿ



ಸೇವೆ ಸಲ್ಲಿಸುತ್ತಿರುವ ಎಂಆರ್‌ಡಬ್ಲ್ಯೂ, ವಿಆರ್‌ಡಬ್ಲ್ಯೂ ಹಾಗೂ ಯುಆರ್‌ಡಬ್ಲ್ಯೂ ಕಾರ್ಯಕರ್ತರು ಹಲವು ವರ್ಷಗಳಿಂದ ತಮ್ಮ ನ್ಯಾಯಯುತ ಬೇಡಿಕೆಗಳ ಈಡೇರಿಕೆಗಾಗಿ ಹೋರಾಟ ನಡೆಸುತ್ತಿದ್ದರೂ ಸರ್ಕಾರ ಸೂಕ್ತ ಸ್ಪಂದನೆ ನೀಡುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕಾರ್ಯಕರ್ತರ ಸೇವೆಯನ್ನು ಕಾಯಂಗೊಳಿಸುವುದು, ಕನಿಷ್ಠ ವೇತನ ನಿಗದಿಪಡಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಕಳೆದ 30 ದಿನಗಳಿಂದ ರಾಮನಗರ ಜಿಲ್ಲಾಧಿಕಾರಿಗಳ ಕಚೇರಿ ಎದುರು ನಿರಂತರ ಧರಣಿ ಸತ್ಯಾಗ್ರಹ ನಡೆಸಲಾಗುತ್ತಿದೆ. ಆದರೂ ಸರ್ಕಾರದಿಂದ ಯಾವುದೇ ಸಕಾರಾತ್ಮಕ ಪ್ರತಿಕ್ರಿಯೆ ದೊರೆತಿಲ್ಲ. ಹೀಗಾಗಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲು ನಿರ್ಧರಿಸಲಾಗಿದೆ ಎಂದು ಹೇಳಿದರು.

ರಾಜ್ಯ ಸರ್ಕಾರವು ಕಳೆದ ಮಾರ್ಚ್ ತಿಂಗಳಿಂದ ವಿಶೇಷಚೇತನರಿಗೆ ನೀಡಬೇಕಾದ ಮಾಸಾಶನವನ್ನು ತಡೆಹಿಡಿದಿದ್ದು, ಇದರಿಂದ ಲಕ್ಷಾಂತರ ಫಲಾನುಭವಿಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಆರೋಪಿಸಿದರು. 2ನೇ ಪುಟಕ್ಕೆ

# ರೈತರ ಹಿತ ಕಾಪಾಡಿ ರಾಷ್ಟ್ರೀಯ ಹೆದ್ದಾರಿ 748ಎ ಕಾಮಗಾರಿ ಪೂರ್ಣಗೊಳಿಸಿ: ಅಮರೇಗೌಡ ಪಾಟೀಲ್ ಬಯ್ಯಾಪುರ

ಲಿಂಗಸುಗೂರು: ಭಾರತಮಾಲಾ ಯೋಜನೆಯಡಿ ನಿರ್ಮಾಣವಾಗುತ್ತಿರುವ ರಾಷ್ಟ್ರೀಯ ಹೆದ್ದಾರಿ 748ಎ ಕಾಮಗಾರಿಯಿಂದ ರೈತರಿಗೆ ತೊಂದರೆಯಾಗದಂತೆ ವೈಜ್ಞಾನಿಕ ಸರ್ವಿಸ್ ರಸ್ತೆ, ಅಂಡರ್‌ಪಾಸ್, ಬೈಪಾಸ್ ಹಾಗೂ ಅಗತ್ಯ ಸೇತುವೆಗಳನ್ನು ನಿರ್ಮಿಸಬೇಕು ಎಂದು ಮಾಜಿ ಸಚಿವ, ಕಾಂಗ್ರೆಸ್ ಮುಖಂಡ ಅಮರೇಗೌಡ ಪಾಟೀಲ್ ಬಯ್ಯಾಪುರ ಒತ್ತಾಯಿಸಿದರು.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಳಗಾವಿಯಿಂದ ಹೈದರಾಬಾದ್‌ಗೆ ಸಂಪರ್ಕ ಕಲ್ಪಿಸುವ ರಾಷ್ಟ್ರೀಯ ಹೆದ್ದಾರಿ ನಿರ್ಮಾಣಕ್ಕೆ ರೈತರ ವಿರೋಧವಿಲ್ಲ. ಆದರೆ ಅಭಿವೃದ್ಧಿಯ ಹೆಸರಿನಲ್ಲಿ ರೈತರ ಕೃಷಿ ಚಟುವಟಿಕೆಗಳಿಗೆ ಅಡ್ಡಿಯಾಗುವಂತಾಗಬಾರದು. ಹೆದ್ದಾರಿ ನಿರ್ಮಾಣದ ಸಂದರ್ಭದಲ್ಲಿ ಸ್ಥಳೀಯ ರೈತರ ಅಗತ್ಯಗಳನ್ನು ಪರಿಗಣಿಸದೆ ಕಾಮಗಾರಿ ನಡೆಸುತ್ತಿರುವುದು ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.




ಮಸ್ಕಿ ತಾಲೂಕಿನ ಮಟ್ಟೂರು, ಸಂತಕಲ್ಲೂರು, ಪಾಮನಕಲ್ಲೂರು, ಅಮೀನಗಡ, ವಟಗಲ್ ಹಾಗೂ ಸರ್ಜಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಶೇ.90ರಷ್ಟು ರೈತರು ತಮ್ಮ ಜಮೀನುಗಳಿಗೆ ತೆರಳಲು ಹೆದ್ದಾರಿ ದಾಟಬೇಕಾದ ಪರಿಸ್ಥಿತಿಯಿದೆ. ತಲೆಮಾರುಗಳಿಂದ ಕೃಷಿ ಜಮೀನುಗಳಿಗೆ ಸಂಪರ್ಕ ಕಲ್ಪಿಸುತ್ತಿದ್ದ ರಸ್ತೆಗಳನ್ನು ಹೆದ್ದಾರಿ ಕಾಮಗಾರಿಯಿಂದಾಗಿ ಮುಚ್ಚಲಾಗುತ್ತಿದೆ. ಇದರಿಂದ ರೈತರು ತಮ್ಮ ಜಮೀನುಗಳಿಗೆ ತೆರಳಲು ಪರದಾಡುವಂತಾಗಿದೆ ಎಂದು ಹೇಳಿದರು.

ಕೃಷಿ ಚಟುವಟಿಕೆಗಳಿಗೆ ಟ್ರ್ಯಾಕ್ಟರ್, ಕಂಬೈನ್ ಹಾರ್ವೆಸ್ಟರ್, ಜೆಸಿಬಿ ಸೇರಿದಂತೆ ಬೃಹತ್ ಯಂತ್ರೋಪಕರಣಗಳ ಬಳಕೆ ಅನಿವಾರ್ಯವಾಗಿದೆ. ಆದರೆ ಈಗಾಗಲೇ ನಿರ್ಮಿಸಿರುವ ಕೆಲವು ಅಂಡರ್‌ಪಾಸ್‌ಗಳ ಎತ್ತರ ಕಡಿಮೆ ಇರುವುದರಿಂದ ಕೃಷಿ ಯಂತ್ರೋಪಕರಣಗಳು ಹಾಗೂ ಬೆಳೆ ಸಾಗಿಸುವ ವಾಹನಗಳ ಸಂಚಾರಕ್ಕೆ ಅಡಚಣೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಭಾರತೀಯ ರಸ್ತೆ ಕಾಂಗ್ರೆಸ್ ಮಾರ್ಗಸೂಚಿ ಹಾಗೂ 2ನೇ ಪುಟಕ್ಕೆ

# ಅಕ್ರಮ ಎಸ್‌ಐಆರ್ ರದ್ದತಿಗೆ ಆಗ್ರಹಿಸಿದ ಪ್ರತಿಭಟನೆಗೆ ನಿರ್ಬಂಧ: ಕೇಂದ್ರ ಸರ್ಕಾರದ ವಿರುದ್ಧ ಸಿಪಿಐ(ಎಂ) ಆಕ್ರೋಶ




ರಾಯಚೂರು, ಅ.10: ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆ ಹಾಗೂ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯನ್ನು ರದ್ದುಗೊಳಿಸುವಂತೆ ಆಗ್ರಹಿಸಿ ನವದೆಹಲಿಯ ಜಂತರ್ ಮಂತರ್‌ನಲ್ಲಿ ಹಮ್ಮಿಕೊಂಡಿದ್ದ ಬೃಹತ್ ಪ್ರತಿಭಟನೆಯನ್ನು ತಡೆಯಲು ಕೇಂದ್ರ ಸರ್ಕಾರ ಗೃಹ ಇಲಾಖೆಯನ್ನು ದುರ್ಬಳಕೆ ಮಾಡಿಕೊಂಡಿದೆ ಎಂದು ಭಾರತ ಕಮ್ಯುನಿಸ್ಟ್ ಪಕ್ಷ (ಮಾರ್ಕ್ಸ್‌ವಾದಿ) ರಾಯಚೂರು ಜಿಲ್ಲಾ ಸಮಿತಿ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ.

ಈ ಕುರಿತು ಶನಿವಾರ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಸಿಪಿಐ(ಎಂ) ಜಿಲ್ಲಾ ಕಾರ್ಯದರ್ಶಿ ಕೆ.ಜಿ. ವೀರೇಶ್, ಅಕ್ಟೋಬರ್ 10ರಂದು ಎಡಪಂಥೀಯ ಹಾಗೂ ಪ್ರಜಾಸತ್ತಾತ್ಮಕ ಸಂಘಟನೆಗಳ ನೇತೃತ್ವದಲ್ಲಿ ನವದೆಹಲಿಯ ಜಂತರ್ ಮಂತರ್‌ನಲ್ಲಿ ಹಮ್ಮಿಕೊಂಡಿದ್ದ ಪ್ರತಿಭಟನೆಯನ್ನು ಹತ್ತಿಕ್ಕಲು ಕೇಂದ್ರ ಸರ್ಕಾರ ಹಲವು ನಿರ್ಬಂಧಗಳನ್ನು ವಿಧಿಸಿದೆ ಎಂದು ಆರೋಪಿಸಿದ್ದಾರೆ.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸರ್ಕಾರದ ನೀತಿ ಮತ್ತು ನಿರ್ಧಾರಗಳನ್ನು ವಿರೋಧಿಸಿ ಶಾಂತಿಯುತವಾಗಿ ಪ್ರತಿಭಟನೆ ನಡೆಸುವುದು ಪ್ರತಿಯೊಬ್ಬ ನಾಗರಿಕನ ಸಂವಿಧಾನಬದ್ಧ ಹಕ್ಕಾಗಿದೆ. ಆದರೆ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ತನ್ನ ಅಧಿಕಾರವನ್ನು ಬಳಸಿಕೊಂಡು ಪ್ರಜಾಸತ್ತಾತ್ಮಕ ಚಳವಳಿಗಳನ್ನು ದಮನಿಸಲು ಮುಂದಾಗಿರುವುದು ಖಂಡನೀಯ. ಇಂತಹ ಕ್ರಮಗಳು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧವಾಗಿವೆ ಎಂದು ಅವರು ತಿಳಿಸಿದ್ದಾರೆ.

ಪ್ರತಿಭಟನಾಕಾರರು ರಾಷ್ಟ್ರ ರಾಜಧಾನಿಗೆ ಆಗಮಿಸದಂತೆ ರೈಲು ಸಂಚಾರಕ್ಕೆ ಅಡ್ಡಿಪಡಿಸಲಾಗಿದೆ. ದೆಹಲಿಯಲ್ಲಿ ಮೆಟ್ರೋ ಸೇವೆಯನ್ನು 12 ಗಂಟೆಗಳ ಕಾಲ ಸ್ಥಗಿತಗೊಳಿಸಲಾಗಿದೆ. ಇಂಟರ್‌ನೆಟ್ ಹಾಗೂ ಸಂಪರ್ಕ ಜಾಲಗಳಿಗೆ ನಿರ್ಬಂಧ ವಿಧಿಸಲಾಗಿದೆ. ಜಂತರ್ ಮಂತರ್ ಕಡೆಗೆ ಪ್ರತಿಭಟನಾಕಾರರು ತೆರಳದಂತೆ ನಗರದ ವಿವಿಧೆಡೆ ಬ್ಯಾರಿಕೇಡ್‌ಗಳನ್ನು ಅಳವಡಿಸಿ ತಪಾಸಣೆ ನಡೆಸಲಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಇದಲ್ಲದೆ, ಭಾರತೀಯ ವಿದ್ಯಾರ್ಥಿ ಫೆಡರೇಷನ್ (ಎಸ್‌ಎಫ್‌ಐ) ಸೇರಿದಂತೆ ವಿವಿಧ ಸಂಘಟನೆಗಳ ಕಚೇರಿಗಳಲ್ಲಿ ಪೊಲೀಸರು ಶೋಧ ನಡೆಸಿ ಕಾರ್ಯಕರ್ತರನ್ನು ಗೃಹಬಂಧನದಲ್ಲಿ ಇರಿಸಿದ್ದಾರೆ. ಸಿಪಿಐ(ಎಂ) ಸಂಸದರು ಹಾಗೂ ಮುಖಂಡರು ತಂಗಿದ್ದ ಸ್ಥಳಗಳಿಗೆ ತಡರಾತ್ರಿ ಪೊಲೀಸರು ತೆರಳಿ ಬೆದರಿಕೆ ಹಾಕಲು ಪ್ರಯತ್ನಿಸಿದ್ದಾರೆ. ಇತರ ಸಂಘಟನೆಗಳ ಮುಖಂಡರ ಮೇಲೆಯೂ ಒತ್ತಡ ಹೇರಲಾಗಿದೆ ಎಂದು ದೂರಿದ್ದಾರೆ.

ಒಂದೆಡೆ ಪ್ರಜಾಸತ್ತಾತ್ಮಕ ಸಂಘಟನೆಗಳ ಪ್ರತಿಭಟನೆಗೆ ಅನುಮತಿ ನಿರಾಕರಿಸಿ ವ್ಯಾಪಕ ನಿರ್ಬಂಧಗಳನ್ನು ವಿಧಿಸಲಾಗುತ್ತಿದ್ದರೆ, ಮತ್ತೊಂದೆಡೆ ಪ್ರತಿಭಟನೆ ವಿರೋಧಿಸುವ ಹಿಂದುತ್ವಪರ ಸಂಘಟನೆಗಳಿಗೆ ಮೆರವಣಿಗೆ ನಡೆಸಲು ಅವಕಾಶ ಕಲ್ಪಿಸಲಾಗುತ್ತಿದೆ. ಈ ರೀತಿಯ ತಾರತಮ್ಯದ ಕ್ರಮಗಳು ರಾಜಧಾನಿಯಲ್ಲಿ ಸಂಘರ್ಷದ ವಾತಾವರಣ ನಿರ್ಮಾಣಕ್ಕೆ ಕಾರಣವಾಗಬಹುದು ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಚುನಾವಣಾ ಆಯೋಗದ ಕಾರ್ಯವೈಖರಿ ಹಾಗೂ ಎಸ್‌ಐರ್ಆ ಪ್ರಕ್ರಿಯೆಯ ಕುರಿತು ಹಲವು ಅನುಮಾನಗಳು ವ್ಯಕ್ತವಾಗುತ್ತಿರುವ ಸಂದರ್ಭದಲ್ಲಿ ಜನರ ಪ್ರಶ್ನೆಗಳಿಗೆ ಉತ್ತರಿಸುವ ಬದಲು ಪ್ರತಿಭಟನೆಗಳನ್ನು ನಿರ್ಬಂಧಿಸುವುದು ಸರಿಯಲ್ಲ. ಚುನಾವಣಾ ವ್ಯವಸ್ಥೆಯ ಮೇಲಿನ ಸಾರ್ವಜನಿಕ ವಿಶ್ವಾಸವನ್ನು ಕಾಪಾಡುವುದು ಸರ್ಕಾರ ಹಾಗೂ ಚುನಾವಣಾ ಆಯೋಗದ ಪ್ರಮುಖ ಜವಾಬ್ದಾರಿಯಾಗಿದೆ ಎಂದು ಹೇಳಿದ್ದಾರೆ.

ಈ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಇಂಡಿಯಾ ಮೈತ್ರಿಕೂಟದ ನಿಯೋಗ ಈಗಾಗಲೇ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾಗಿ ಮನವಿ ಸಲ್ಲಿಸಿದ್ದು, ಸೋಮವಾರ ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿಗಳನ್ನು ಭೇಟಿಯಾಗಲಿದೆ ಎಂದು ಹೇಳಿಕೆಯಲ್ಲಿ ತಿಳಿಸಿದ್ದಾರೆ.

ದೇಶದ ಪ್ರಜಾಪ್ರಭುತ್ವ ವ್ಯವಸ್ಥೆ ಹಾಗೂ ನಾಗರಿಕರ ಸಂವಿಧಾನಬದ್ಧ ಹಕ್ಕುಗಳ ರಕ್ಷಣೆಗೆ ರಾಷ್ಟ್ರಪತಿಗಳು ಮತ್ತು ಸರ್ವೋಚ್ಚ ನ್ಯಾಯಾಲಯ ಸೂಕ್ತ ಕ್ರಮ ಕೈಗೊಳ್ಳಬೇಕು. ಪ್ರತಿಭಟನಾಕಾರರ ಮೇಲೆ ವಿಧಿಸಿರುವ ಎಲ್ಲ ನಿರ್ಬಂಧಗಳನ್ನು ತಕ್ಷಣ ತೆರವುಗೊಳಿಸಬೇಕು. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡಬೇಕು ಹಾಗೂ ವಿವಾದಿತ ಎಸ್‌ಐರ್ಆ ಪ್ರಕ್ರಿಯೆಯನ್ನು ರದ್ದುಗೊಳಿಸಬೇಕು ಎಂದು ಕೆ.ಜಿ. ವೀರೇಶ್ ಒತ್ತಾಯಿಸಿದ್ದಾರೆ.

ಅಮೃತ ವಾಣಿ

ಸಂಪತ್ತಿನ ಬೆಲೆಗಿಂತ ಸಂಸ್ಕಾರದ ಬೆಲೆಯೇ ಹೆಚ್ಚು.

1612 ನೆಯ ದಿನಕ್ಕೆ ಏಮ್ಸ್ ಹೋರಾಟ

अखिल भारतीय आयुर्विज्ञान संस्थान
ALL INDIA INSTITUTE OF MEDICAL SCIENCES
शरीरमाद्यं खलु धर्मसाधनम्

# ಎಸ್‌ಐಆರ್ ರದ್ದತಿಗೆ ಆಗ್ರಹಿಸಿ ಪಂಜಿನ ಮೆರವಣಿಗೆ




ರಾಯಚೂರು, ಅ.10: ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯನ್ನು ರದ್ದುಗೊಳಿಸುವಂತೆ ಹಾಗೂ ನವದೆಹಲಿಯಲ್ಲಿ ಶನಿವಾರ ನಡೆದ ಪ್ರತಿಭಟನೆ ವೇಳೆ ಬಂಧಿಸಲಾದ ಹೋರಾಟಗಾರರನ್ನು ಬೇಷರತ್ತಾಗಿ ಬಿಡುಗಡೆ ಮಾಡುವಂತೆ ಆಗ್ರಹಿಸಿ ಎಡ ಪ್ರಜಾಸತ್ತಾತ್ಮಕ ಪಕ್ಷಗಳು ಮತ್ತು ಪ್ರಗತಿಪರ ಸಂಘಟನೆಗಳ ನೇತೃತ್ವದಲ್ಲಿ ನಗರದ ತೀನ್ ಖಂದಿಲ್ ವೃತ್ತದಿಂದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದವರೆಗೆ ಪಂಜಿನ ಮೆರವಣಿಗೆ ನಡೆಸಲಾಯಿತು.

ಅಂಬೇಡ್ಕರ್ ವೃತ್ತದಲ್ಲಿ ನಡೆದ ಪ್ರತಿಭಟನಾ ಸಭೆಯಲ್ಲಿ ಸಿಪಿಐ(ಎಂ) ಜಿಲ್ಲಾ ಕಾರ್ಯದರ್ಶಿ ಕೆ.ಜಿ. ವೀರೇಶ, ಮಾರೆಪ್ಪ ಹರವಿ, ಹಸಿಮುದ್ದೀನ್, ಖಾಜಾ ಅಸ್ಲಂ, ಮಹೇಶ ಮಲ್ಲನಗೌಡ ಹಾಗೂ ಅಕ್ಬರ್ ನಾಂಗುಡಿ ಮಾತನಾಡಿ, ಕೇಂದ್ರ ಸರ್ಕಾರದ ಸರ್ವಾಧಿಕಾರಿ ಧೋರಣೆಯನ್ನು ಖಂಡಿಸಿದರು.

ಪ್ರತಿಭಟನೆಯ ವೇಳೆ ಬಂಧಿಸಲಾದ ಎಲ್ಲ ಹೋರಾಟಗಾರರನ್ನು ಬೇಷರತ್ತಾಗಿ ಬಿಡುಗಡೆ ಮಾಡಬೇಕು. ಸಂವಿಧಾನ ವಿರೋಧಿ ಎಸ್‌ಐರ್ಆ ಪ್ರಕ್ರಿಯೆಯನ್ನು ರದ್ದುಗೊಳಿಸಬೇಕು ಹಾಗೂ ಮುಖ್ಯ ಚುನಾವಣಾ ಆಯುಕ್ತ ಗ್ಯಾನೇಶ್ ಕುಮಾರ್ ತಮ್ಮ ಹುದ್ದೆಗೆ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಡಿ.ಎಸ್. ಶರಣಬಸವ, ಆಂಜನೇಯ ಕುರುಬದೊಡ್ಡಿ, ಅಶ್ರಫ್ ಅಲಿ, ಜಿಲಾನಿ ಪಾಷಾ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ: ರಾಯಚೂರಿನಲ್ಲಿ ಕಾಂಗ್ರೆಸ್ ಮುಖಂಡರ ಸಭೆ

ಶಾಲಾ-ಕಾಲೇಜುಗಳ ಸಿಬ್ಬಂದಿಯ ಉದ್ಯೋಗ ಭದ್ರತೆ ಸೇರಿದಂತೆ ಹಲವು ಸಮಸ್ಯೆಗಳ ಪರಿಹಾರಕ್ಕಾಗಿ ವಿಧಾನ ಪರಿಷತ್ತಿನ ಒಳಗೂ ಹೊರಗೂ ಹೋರಾಟ ನಡೆಸಲು ಬದ್ಧನಾಗಿದ್ದೇನೆ ಎಂದು ತಿಳಿಸಿದರು.

ಶಿಕ್ಷಕರ ಸಮಸ್ಯೆಗಳನ್ನು ಅರಿತುಕೊಂಡು ಅವುಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವುದು ತಮ್ಮ ಪ್ರಮುಖ ಉದ್ದೇಶವಾಗಿದೆ. ಚುನಾವಣೆಯ ದಿನದವರೆಗೆ ಕಾಯದೆ ಈಗಿನಿಂದಲೇ ಶಿಕ್ಷಕ ಮತದಾರರನ್ನು ಸಂಪರ್ಕಿಸಿ ಅವರ ಅಹವಾಲುಗಳನ್ನು ಆಲಿಸಬೇಕು ಎಂದು ಪಕ್ಷದ ಕಾರ್ಯಕರ್ತರಿಗೆ ಮನವಿ ಮಾಡಿದರು.

ವಿಧಾನ ಪರಿಷತ್ ಸದಸ್ಯ ಚಂದ್ರಶೇಖರ ಪಾಟೀಲ್, ಮಾನ್ವಿ ಶಾಸಕ ಹಂಪಯ್ಯ ನಾಯಕ ಹಾಗೂ ರಾಯಚೂರು ಗ್ರಾಮೀಣ ಶಾಸಕ ಬಸನಗೌಡ ದದ್ದಲ್ ಮಾತನಾಡಿ, ಚುನಾವಣಾ ಸಿದ್ಧತೆ ಮತ್ತು ಪಕ್ಷದ ಸಂಘಟನೆಯ ಕುರಿತು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಸಭೆಯಲ್ಲಿ ಮಹಾನಗರ ಪಾಲಿಕೆಯ ಹಿರಿಯ ಸದಸ್ಯ ಜಯಣ್ಣ, ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಪರಾಜಿತ ಅಭ್ಯರ್ಥಿ ಮಹಮ್ಮದ್ ಶಾಲಂ, ಮುಖಂಡರಾದ ರಾಮಣ್ಣ ಇರಬಗೇರಾ, ಜಯವಂತರಾವ್ ಪತಂಗೆ, ರಜಾಕ್ ಉಸ್ತಾದ್, ಜಿ. ಶಿವಮೂರ್ತಿ, ಅಮರೇಗೌಡ ಹಂಚಿನಾಳ, ರುದ್ರಪ್ಪ ಅಂಗಡಿ, ತಾಯಣ್ಣ ನಾಯಕ, ಶ್ರೀದೇವಿ ನಾಯಕ, ನರಸಿಂಹಲು ಮಾಡಗಿರಿ, ಎನ್. ಶ್ರೀನಿವಾಸರೆಡ್ಡಿ, ಆಂಜನೇಯ ಕುರುಬದೊಡ್ಡಿ, ಅಸ್ಲಂ ಪಾಷಾ, ಸುಧೀಂದ್ರ ಜಹಾಗಿರದಾರ, ದರೂರು ಬಸವರಾಜ ಪಾಟೀಲ್, ನಾಗೇಂದ್ರಪ್ಪ ಮಟಮಾರಿ, ಅಂಬಯ್ಯ, ಅಬ್ದುಲ್ ಗಫೂರ್, ಶಿವಕುಮಾರ ಚುಕ್ಕಿ, ಶಿವಶರಣಗೌಡ ಪಾಟೀಲ್, ವೀರೇಶ ನಾಯಕ, ಖಾಜಿ ಮಾಲಿಕ್, ಲಿಂಗಪ್ಪ ಧಡೇಸೂಗೂರು, ಭೀಮನಗೌಡ ಇಟಗಿ, ಮಲ್ಲಿಕಾರ್ಜುನಗೌಡ, ಬಷೀರ್, ಚನ್ನಬಸವ, ಜಿ. ತಿಮ್ಮಾರೆಡ್ಡಿ, ಮರಿಸ್ವಾಮಿ ಗಟ್ಟುಬಿಚ್ಚಾಲಿ, ಮಲ್ಲಿಕಾರ್ಜುನ ನಾಯಕ, ರಾಮನಗೌಡ, ಫಯಾಜುದ್ದೀನ್, ಬಸವರಾಜ ವಕೀಲ, ಯು. ಗೋವಿಂದರೆಡ್ಡಿ, ಶಹಬಾಜ್, ರಮೇಶ ರೊಸ್ಲೆ, ಪ್ರಕಾಶ, ರಂಗರಾಜ ನಾಯಕ ಸೇರಿದಂತೆ ಪಕ್ಷದ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಶ್ರೀ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನದಲ್ಲಿ ಅ.11ರಿಂದ 55ನೇ ನವರಾತ್ರಿ ಉತ್ಸವ

ಪಾಲ್ಗೊಳ್ಳಬಹುದು ಎಂದು ತಿಳಿಸಿದರು.

ಉತ್ಸವದ ಅಂಗವಾಗಿ ಭಕ್ತರಿಗೆ ವಿವಿಧ ವಿಶೇಷ ಪೂಜಾ ಸೇವೆಗಳಲ್ಲಿ ಪಾಲ್ಗೊಳ್ಳಲು ಅವಕಾಶ ಕಲ್ಪಿಸಲಾಗಿದೆ. ದೇವಸ್ಥಾನದಲ್ಲಿ ನಿತ್ಯ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶ್ರೀ ಲಕ್ಷ್ಮೀ ವೆಂಕಟೇಶ್ವರ ಸ್ವಾಮಿಯ ಆಶೀರ್ವಾದ ಪಡೆಯಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಎಸ್. ಚಂದ್ರಶೇಖರ, ಜೂಕುರ್ ಶ್ರೀನಿವಾಸ್, ಕೆ. ಆಂಜನೇಯ್ಯ, ಬಿ. ವೆಂಕೋಬ, ಬಿ. ನಾಗರಾಜ, ವೈ. ವೆಂಕೋಬ, ಬೋಲಾಬಂಡಿ ಶ್ರೀನಿವಾಸ್, ಕೆ. ಚಿದಾನಂದ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ವಿಶೇಷಚೇತನರ ಬಾಕಿ ಮಾಸಾಶನ ಬಿಡುಗಡೆಗೆ ಆಗ್ರಹಿಸಿ ಅ.15ರಂದು ವಿಧಾನಸೌಧದವರೆಗೆ ಬೃಹತ್ ಪಾದಯಾತ್ರೆ

ಮಾಸಾಶನವನ್ನೇ ನಂಬಿಕೊಂಡು ಜೀವನ ಸಾಗಿಸುತ್ತಿರುವ ಅನೇಕ ವಿಶೇಷಚೇತನರು ತಮ್ಮ ದೈನಂದಿನ ಅಗತ್ಯಗಳು, ಔಷಧೋಪಚಾರ ಹಾಗೂ ಕುಟುಂಬ ನಿರ್ವಹಣೆಗೆ ತೊಂದರೆ ಅನುಭವಿಸುವಂತಾಗಿದೆ. ಸರ್ಕಾರ ಈ ಸಮಸ್ಯೆಯ ಗಂಭೀರತೆಯನ್ನು ಅರಿತು ಬಾಕಿ ಉಳಿದಿರುವ ಏಳು ತಿಂಗಳ ಮಾಸಾಶನವನ್ನು ಅರ್ಹ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಜಮಾ ಮಾಡಬೇಕು ಎಂದು ಒತ್ತಾಯಿಸಿದರು.

ವಿಶೇಷಚೇತನರ ಕಲ್ಯಾಣ ಯೋಜನೆಗಳನ್ನು ತಳಮಟ್ಟದಲ್ಲಿ ಅನುಷ್ಠಾನಗೊಳಿಸುವಲ್ಲಿ ಎಂಆರ್‌ಡಬ್ಲ್ಯೂ, ವಿಆರ್‌ಡಬ್ಲ್ಯೂ ಹಾಗೂ ಯುಆರ್‌ಡಬ್ಲ್ಯೂ ಕಾರ್ಯಕರ್ತರು ಪ್ರಮುಖ ಪಾತ್ರ ವಹಿಸುತ್ತಿದ್ದಾರೆ. ಸರ್ಕಾರದ ವಿವಿಧ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವುದು, ವಿಶೇಷಚೇತನರಿಗೆ ಮಾರ್ಗದರ್ಶನ ನೀಡುವುದು ಹಾಗೂ ಅವರ ಸಮಸ್ಯೆಗಳಿಗೆ ಸ್ಪಂದಿಸುವಂತಹ ಜವಾಬ್ದಾರಿಗಳನ್ನು ನಿರ್ವಹಿಸುತ್ತಿದ್ದರೂ ಉದ್ಯೋಗ ಭದ್ರತೆ ಮತ್ತು ಸಮರ್ಪಕ ವೇತನ ಸಿಗುತ್ತಿಲ್ಲ. ಆದ್ದರಿಂದ ಕಾರ್ಯಕರ್ತರ ಸೇವೆಯನ್ನು ಕಾಯಂಗೊಳಿಸಿ ಕನಿಷ್ಠ ವೇತನ ಜಾರಿಗೊಳಿಸಲು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ರಾಮನಗರದಲ್ಲಿ ನಡೆಯುತ್ತಿರುವ ಧರಣಿ ಸ್ಥಳಕ್ಕೆ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಭೇಟಿ ನೀಡಿ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿದ್ದಾರೆ. ಅಕ್ಟೋಬರ್ 14ರಂದು ರಾಮನಗರ ಜಿಲ್ಲಾಧಿಕಾರಿಗಳ ಕಚೇರಿಯಿಂದ ಆರಂಭವಾಗಲಿರುವ ಬೃಹತ್ ಪಾದಯಾತ್ರೆಯು ಬೆಂಗಳೂರು ವಿಧಾನಸೌಧದವರೆಗೆ ನಡೆಯಲಿದ್ದು, ಸರ್ಕಾರದ ಗಮನ ಸೆಳೆಯುವ ಉದ್ದೇಶ ಹೊಂದಿದೆ ಎಂದು ತಿಳಿಸಿದರು.

ರಾಜ್ಯದ ಎಲ್ಲ ಜಿಲ್ಲೆಗಳ ವಿಶೇಷಚೇತನರು ಹಾಗೂ ಎಂಆರ್‌ಡಬ್ಲ್ಯೂ, ವಿಆರ್‌ಡಬ್ಲ್ಯೂ ಮತ್ತು ಯುಆರ್ ಡಬ್ಲ್ಯೂ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾದಯಾತ್ರೆಯಲ್ಲಿ ಭಾಗವಹಿಸಬೇಕು. ರಾಯಚೂರು ಜಿಲ್ಲೆಯ ಕಾರ್ಯಕರ್ತರು ಕೂಡ ಒಗ್ಗಟ್ಟಿನಿಂದ ಹೋರಾಟದಲ್ಲಿ ಪಾಲ್ಗೊಂಡು ತಮ್ಮ ನ್ಯಾಯಯುತ ಹಕ್ಕುಗಳಿಗಾಗಿ ಧ್ವನಿ ಎತ್ತಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸಂಚಾಲಕ ಬಸವರಾಜ ಸಾಸಲಮರಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜಶೇಖರ್ ಕಟ್ನೆನ್ನೂರು, ರಾಜ್ಯ ಒಕ್ಕೂಟದ ಕಾರ್ಯದರ್ಶಿ ಮಹ್ಮದ್ ಅಲಿ ಮಟಮಾರಿ ಉಪಸ್ಥಿತರಿದ್ದರು.

# ರೈತರ ಹಿತ ಕಾಪಾಡಿ ರಾಷ್ಟ್ರೀಯ ಹೆದ್ದಾರಿ 748ಎ ಕಾಮಗಾರಿ ಪೂರ್ಣಗೊಳಿಸಿ: ಅಮರೇಗೌಡ ಪಾಟೀಲ್ ಬಯ್ಯಾಪುರ

ಸ್ಥಳೀಯ ಅಗತ್ಯಗಳಿಗೆ ಅನುಗುಣವಾಗಿ ಹೆದ್ದಾರಿ ವಿನ್ಯಾಸದಲ್ಲಿ ಬದಲಾವಣೆ ಮಾಡಬೇಕು. ರೈತರ ಜಮೀನುಗಳಿಗೆ ಸಂಪರ್ಕ ಕಲ್ಪಿಸುವ ಸರ್ವಿಸ್ ರಸ್ತೆ ಮತ್ತು ಸೂಕ್ತ ಎತ್ತರದ ಅಂಡರ್‌ಪಾಸ್‌ಗಳನ್ನು ನಿರ್ಮಿಸಬೇಕು ಎಂದು ಆಗ್ರಹಿಸಿದರು.

ಹೆದ್ದಾರಿಗಾಗಿ ಭೂಮಿ ಕಳೆದುಕೊಂಡ ರೈತರಿಗೆ ನ್ಯಾಯಯುತ ಪರಿಹಾರ ನೀಡಬೇಕು. ಜಮೀನುಗಳಿಗೆ ಸಂಪರ್ಕ ರಸ್ತೆ ಕಲ್ಪಿಸಬೇಕು ಎಂಬ ಬೇಡಿಕೆಗಳ ಕುರಿತು ಜಿಲ್ಲಾಧಿಕಾರಿ, ಭೂಸ್ವಾಧೀನ ಅಧಿಕಾರಿಗಳು ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ ಪ್ರಯೋಜನವಾಗಿಲ್ಲ. ರೈತರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಬದಲು ಪೊಲೀಸ್ ಬಲ ಬಳಸಿಕೊಂಡು ಕಾಮಗಾರಿ ಮುಂದುವರಿಸಲು ಪ್ರಯತ್ನಿಸುತ್ತಿರುವುದು ಖಂಡನೀಯ ಎಂದರು.

ಕೇಂದ್ರದ ಸಂಬಂಧಪಟ್ಟ ಸಚಿವರು, ಜಿಲ್ಲಾಧಿಕಾರಿ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು, ತಾಂತ್ರಿಕ ಎಂಜಿನಿಯರ್‌ಗಳು, ಸಹಾಯಕ ಆಯುಕ್ತರು ಹಾಗೂ ರೈತ ಹೋರಾಟ ಸಮಿತಿಯ ಪ್ರತಿನಿಧಿಗಳು ಮುಂದಿನ 15 ದಿನಗಳೊಳಗೆ ಕಾಮಗಾರಿ ನಡೆಯುತ್ತಿರುವ ಪ್ರದೇಶಗಳಿಗೆ ಜಂಟಿಯಾಗಿ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ರೈತರ ಅಹವಾಲುಗಳನ್ನು ಆಲಿಸಿ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ಕುರಿತು ಲಿಖಿತ ಭರವಸೆ ನೀಡಬೇಕು ಎಂದು ಒತ್ತಾಯಿಸಿದರು.

ಹೆದ್ದಾರಿ ಕಾಮಗಾರಿ ಗುತ್ತಿಗೆದಾರರಿಂದ ರೈತರಿಗೆ ಕಿರುಕುಳ ಹಾಗೂ ದೌರ್ಜನ್ಯ ನಡೆಯುತ್ತಿದೆ ಎಂಬ ದೂರುಗಳ ಬಗ್ಗೆಯೂ ಅಧಿಕಾರಿಗಳು ತನಿಖೆ ನಡೆಸಬೇಕು. ರೈತರ ನ್ಯಾಯಯುತ ಬೇಡಿಕೆಗಳನ್ನು ನಿರ್ಲಕ್ಷಿಸಿದರೆ ಹೆದ್ದಾರಿ ಕಾಮಗಾರಿ ತಡೆದು, ರಸ್ತೆ ತಡೆ ಸೇರಿದಂತೆ ಹಂತ ಹಂತವಾಗಿ ಶಾಂತಿಯುತ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಕರಡಕಲ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಪಾಮಯ್ಯ ಮುರಾರಿ, ರೈತ ಹೋರಾಟಗಾರರಾದ ಜಗದೀಶ್ ಹಾಗೂ ಶರಣಪ್ಪ ಉದ್ಬಾಳ ಉಪಸ್ಥಿತರಿದ್ದರು.

## ಮೊದಲನೇ ಪುಟದಿಂದ

# ಉಪ ಚುನಾವಣಾ ಆಯುಕ್ತರಾಗಿ ಪ್ರಕಾಶ್ ರಾಜ್‌ಪುರೋಹಿತ್ ನೇಮಕ: 27 ಹಿರಿಯ ಅಧಿಕಾರಿಗಳಿಗೆ ಹೊಸ ಜವಾಬ್ದಾರಿ

ಡೇಕಾ ಅವರಿಗೆ ರಾಷ್ಟ್ರೀಯ ಆರೋಗ್ಯ ಪ್ರಾಧಿಕಾರದ ಜಂಟಿ ಕಾರ್ಯದರ್ಶಿ ಹುದ್ದೆಯ ಜವಾಬ್ದಾರಿ ನೀಡಲಾಗಿದೆ. ಇದೇ ಪ್ರಾಧಿಕಾರದಲ್ಲಿ ಜಂಟಿ ಕಾರ್ಯದರ್ಶಿ ಹಂತದ ಹೆಚ್ಚುವರಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಆಶಿಶ್ ಮಾಧವರಾವ್ ಅವರನ್ನು ನೇಮಿಸಲಾಗಿದೆ.

ಇದಲ್ಲದೆ, ನಿಖಿಲ್ ವರ್ಮಾ ಅವರನ್ನು ದೆಹಲಿಯ ವಿದೇಶಿ ವ್ಯಾಪಾರದ ಹೆಚ್ಚುವರಿ ಮಹಾನಿರ್ದೇಶಕರಾಗಿ, ತನ್ವಿ ಸುಂದ್ರಿಯಾಲ್ ಅವರನ್ನು ಕಾರ್ಪೊರೇಟ್ ವ್ಯವಹಾರಗಳ ಸಚಿವಾಲಯದ ಜಂಟಿ ಕಾರ್ಯದರ್ಶಿಯಾಗಿ ಹಾಗೂ ಇಂದರ್‌ಜೀತ್ ಸಿಂಗ್ ಅವರನ್ನು ಸಂಸ್ಕೃತಿ ಸಚಿವಾಲಯದ ಜಂಟಿ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದೆ.

ಕೇಂದ್ರ ಸರ್ಕಾರದ ವಿವಿಧ ಇಲಾಖೆಗಳ ಆಡಳಿತಾತ್ಮಕ ಕಾರ್ಯನಿರ್ವಹಣೆಗೆ ಸಂಬಂಧಿಸಿದಂತೆ ಈ ಅಧಿಕಾರಿಗಳಿಗೆ ಹೊಸ ಜವಾಬ್ದಾರಿಗಳನ್ನು ನೀಡಲಾಗಿದ್ದು, ನೇಮಕಾತಿಗಳ ವಿವರಗಳನ್ನು ಕೇಂದ್ರ ಸಿಬ್ಬಂದಿ ಸಚಿವಾಲಯ ತನ್ನ ಅಧಿಕೃತ ಆದೇಶದಲ್ಲಿ ಪ್ರಕಟಿಸಿದೆ.

# ಪಿಡಬ್ಲ್ಯೂಡಿ ಕಚೇರಿಯಲ್ಲಿ ನಿಗೂಢ ಗೊಂಬೆ ಪತ್ತೆ: ಸಿಬ್ಬಂದಿಯಲ್ಲಿ ಆತಂಕ

ಇದನ್ನು ವಾಮಾಚಾರದ ಉದ್ದೇಶದಿಂದ ಇರಿಸಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ.

ಕಚೇರಿಯ ಶೌಚಾಲಯಕ್ಕೆ ನೀರಿನ ಸರಬರಾಜು ಸ್ಥಗಿತಗೊಂಡ ಹಿನ್ನೆಲೆಯಲ್ಲಿ ನೀರಿನ ಟ್ಯಾಂಕ್ ಪರಿಶೀಲಿಸಲು ಮೇಲ್ಭಾಗಕ್ಕೆ ತೆರಳಿದ್ದ ಮಹಿಳಾ ಸಿಬ್ಬಂದಿಗೆ ಮರದಲ್ಲಿ ನೇತಾಡುತ್ತಿದ್ದ ಗೊಂಬೆ ಕಾಣಿಸಿದೆ. ವಿಚಿತ್ರ ರೀತಿಯಲ್ಲಿ ಸಿದ್ಧಪಡಿಸಲಾಗಿದ್ದ ಗೊಂಬೆಯನ್ನು ಕಂಡು ಗಾಬರಿಗೊಂಡ ಅವರು, ತಕ್ಷಣವೇ ಇತರ ಸಿಬ್ಬಂದಿಗೆ ವಿಷಯ ತಿಳಿಸಿದ್ದಾರೆ. ಬಳಿಕ ಈ ವಿಚಾರವನ್ನು ಎಇಇ ಮಹೇಶ್ ಕುಮಾರ್ ಅವರ ಗಮನಕ್ಕೆ ತರಲಾಗಿದೆ.

ವಿಷಯ ತಿಳಿದ ಮಹೇಶ್ ಕುಮಾರ್ ಅವರು ಗೊಂಬೆಯನ್ನು ತೆರವುಗೊಳಿಸಿ ನಾಶಪಡಿಸುವಂತೆ ಸೂಚಿಸಿದ್ದಾರೆ ಎನ್ನಲಾಗಿದೆ. ಅದರಂತೆ ಸಿಬ್ಬಂದಿ ಗೊಂಬೆಯನ್ನು ಮರದಿಂದ ತೆಗೆದು ಕಚೇರಿಯ ಮೇಲ್ಭಾಗದಲ್ಲಿಯೇ ಪೆಟ್ರೋಲ್ ಸುರಿದು ಸುಟ್ಟುಹಾಕಿದ್ದಾರೆ. ಈ ಪ್ರಕ್ರಿಯೆಯನ್ನು ಮೊಬೈಲ್‌ನಲ್ಲಿ ವಿಡಿಯೋ ಹಾಗೂ ಛಾಯಾಚಿತ್ರಗಳ ಮೂಲಕ ದಾಖಲಿಸಿಕೊಂಡಿದ್ದಾರೆ.

ಇನ್ನು ಕಚೇರಿ ಆವರಣಕ್ಕೆ ಪ್ರವೇಶಿಸಿ ಗೊಂಬೆಯನ್ನು ಮರಕ್ಕೆ ಕಟ್ಟಿದವರು ಯಾರು ಎಂಬುದನ್ನು ಪತ್ತೆಹಚ್ಚಲು ಸಿಸಿಟಿವಿ ಕ್ಯಾಮೆರಾಗಳ ದೃಶ್ಯಾವಳಿಗಳನ್ನು ಪರಿಶೀಲಿಸಲಾಗಿದೆ. ಎರಡು ದಿನಗಳ ಕಾಲ ದೃಶ್ಯಾವಳಿಗಳನ್ನು ತಪಾಸಣೆ ನಡೆಸಿದರೂ ಕೃತ್ಯ ಎಸಗಿದವರ ಕುರಿತು ಯಾವುದೇ ಸುಳಿವು ಲಭ್ಯವಾಗಿಲ್ಲ ಎಂದು ತಿಳಿದುಬಂದಿದೆ. ಇದರಿಂದ ಸಿಬ್ಬಂದಿಯಲ್ಲಿನ ಅನುಮಾನ ಹಾಗೂ ಆತಂಕ ಮತ್ತಷ್ಟು ಹೆಚ್ಚಾಗಿದೆ.

ಮತ್ತೊಂದೆಡೆ, ಲೋಕೋಪಯೋಗಿ ಇಲಾಖೆಯ ವಿವಿಧ ಕಾಮಗಾರಿಗಳನ್ನು ಪೂರ್ಣಗೊಳಿಸಿದ ಗುತ್ತಿಗೆದಾರರಿಗೆ ಬಿಲ್ ಮೊತ್ತ ಪಾವತಿಯಾಗದಿರುವ ಹಿನ್ನೆಲೆಯಲ್ಲಿ ಕೆಲವರು ಕಚೇರಿಗೆ ಪದೇಪದೇ ಅಲೆದಾಡುತ್ತಿದ್ದಾರೆ ಎನ್ನಲಾಗಿದೆ. ಹಣ ಬಿಡುಗಡೆ ವಿಳಂಬದಿಂದ ಅಸಮಾಧಾನಗೊಂಡವರೇ ಅಧಿಕಾರಿಗಳ ಮೇಲೆ ಒತ್ತಡ ಹೇರುವ ಅಥವಾ ಭಯ ಹುಟ್ಟಿಸುವ ಉದ್ದೇಶದಿಂದ ಇಂತಹ ಕೃತ್ಯ ನಡೆಸಿರಬಹುದೇ ಎಂಬ ಪ್ರಶ್ನೆ ಉದ್ಭವಿಸಿದೆ. ಆದರೆ, ಈ ಅನುಮಾನಕ್ಕೆ ಪೂರಕವಾದ ಯಾವುದೇ ಖಚಿತ ಸಾಕ್ಷ್ಯಗಳು ಇದುವರೆಗೆ ಲಭ್ಯವಾಗಿಲ್ಲ.

ಸರ್ಕಾರಿ ಕಚೇರಿಯ ಆವರಣದಲ್ಲಿಯೇ ಇಂತಹ ನಿಗೂಢ ಗೊಂಬೆ ಪತ್ತೆಯಾಗಿರುವುದು ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಇದು ಯಾರಾದರೂ ಉದ್ದೇಶಪೂರ್ವಕವಾಗಿ ಭಯ ಸೃಷ್ಟಿಸಲು ನಡೆಸಿದ ಕೃತ್ಯವೇ ಅಥವಾ ಸಿಬ್ಬಂದಿಯನ್ನು ಗೊಂದಲಕ್ಕೀಡುಮಾಡುವ ಪ್ರಯತ್ನವೇ ಎಂಬುದು ಸ್ಪಷ್ಟವಾಗಿಲ್ಲ.

ಘಟನೆಯ ಕುರಿತು ಲೋಕೋಪಯೋಗಿ ಇಲಾಖೆ ಸಿಬ್ಬಂದಿ ಹಾಗೂ ನಗರದ ಇತರ ಸರ್ಕಾರಿ ಕಚೇರಿಗಳಲ್ಲಿಯೂ ವ್ಯಾಪಕ ಚರ್ಚೆ ನಡೆಯುತ್ತಿದೆ. ಗೊಂಬೆಯನ್ನು ಕಟ್ಟಿದವರ ಗುರುತು ಮತ್ತು ಅದರ ಹಿಂದಿನ ನೈಜ ಉದ್ದೇಶ ಪತ್ತೆಯಾದಾಗ ಮಾತ್ರ ಪ್ರಕರಣದ ಸತ್ಯಾಂಶ ಹೊರಬರಬೇಕಿದೆ.

# ಗಾಣೇಕಲ್ ಜಲಾಶಯದಿಂದ ನೀರು ಬಿಡುಗಡೆ: ಕುಡಿಯುವ ನೀರು, ಕೃಷಿಗೆ ಮೊದಲ ಆದ್ಯತೆ: ಶಾಸಕ ಬಸನಗೌಡ ದದ್ದಲ್

ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ರೈತರು ಬೆಳೆದಿರುವ ಬೆಳೆಗಳಿಗೆ ಅಗತ್ಯವಿರುವ ನೀರು ಲಭ್ಯವಾಗುವಂತೆ ಕಾಲುವೆಗಳಲ್ಲಿ ನೀರಿನ ಹರಿವನ್ನು ವ್ಯವಸ್ಥಿತವಾಗಿ ನಿರ್ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಸಾರ್ವಜನಿಕರಿಗೆ ಕುಡಿಯುವ ನೀರಿನ ಕೊರತೆ ಎದುರಾಗದಂತೆ ನೋಡಿಕೊಳ್ಳುವುದು ಹಾಗೂ ರೈತರ ಕೃಷಿ ಚಟುವಟಿಕೆಗಳಿಗೆ ಅಗತ್ಯ ನೀರಾವರಿ ಸೌಲಭ್ಯ ಒದಗಿಸುವುದು ನಮ್ಮ ಪ್ರಮುಖ ಆದ್ಯತೆಯಾಗಿದೆ. ಲಭ್ಯವಿರುವ ಜಲಸಂಪನ್ಮೂಲವನ್ನು ಸಮರ್ಪಕವಾಗಿ ಬಳಸಿಕೊಂಡು ಜನರು ಮತ್ತು ರೈತರಿಗೆ ಅನುಕೂಲ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕ ಬಸನಗೌಡ ದದ್ದಲ್ ತಿಳಿಸಿದರು.

ಈ ಸಂದರ್ಭದಲ್ಲಿ ಶಿವಪ್ಪ ನಾಯಕ, ಚೆನ್ನಬಸವ, ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಉಪಸ್ಥಿತರಿದ್ದರು.

# ಮಗನ ನಿಗೂಢ ಸಾವಿನ ಸತ್ಯಕ್ಕಾಗಿ ತಾಯಿಯ ನ್ಯಾಯದ ಹೋರಾಟ

ಸಮಾನ ಆದ್ಯತೆ ನೀಡಬೇಕು. ಸೂಕ್ತ ತನಿಖೆ ಪೂರ್ಣಗೊಳ್ಳುವ ಮೊದಲೇ ಯಾರೂ ತಪ್ಪಿತಸ್ಥರಲ್ಲ ಎಂಬ ನಿರ್ಧಾರಕ್ಕೆ ಬರುವುದು ಹೇಗೆ ಎಂದು ಪ್ರಶ್ನಿಸಿದರು. ಈ ಆರೋಪಗಳ ಬಗ್ಗೆ ಸಂಬಂಧಪಟ್ಟವರ ಪ್ರತಿಕ್ರಿಯೆ ಲಭ್ಯವಾಗಿಲ್ಲ.

ಕುಟುಂಬದ ಸಂಕಷ್ಟವನ್ನು ವಿವರಿಸಿದ ಅವರು, ತಮ್ಮ ಪತಿ ಈ ಹಿಂದೆಯೇ ಮೃತಪಟ್ಟಿದ್ದು, ಮಗಳು ಅಂಗವೈಕಲ್ಯದಿಂದ ಬಳಲುತ್ತಿದ್ದಾಳೆ. ಮನೆಯ ಕೃಷಿ ಚಟುವಟಿಕೆಗಳನ್ನು ಮಗ ಶಂಕರಗೌಡನೇ ನಿರ್ವಹಿಸುತ್ತಿದ್ದ. ಆತನ ಅಕಾಲಿಕ ಸಾವಿನಿಂದ ಕುಟುಂಬ ಆರ್ಥಿಕ ಹಾಗೂ ಮಾನಸಿಕ ಸಂಕಷ್ಟಕ್ಕೆ ಸಿಲುಕಿದೆ. ಇಂತಹ ಪರಿಸ್ಥಿತಿಯಲ್ಲಿಯೂ ನ್ಯಾಯಕ್ಕಾಗಿ ಪೊಲೀಸ್ ಠಾಣೆ ಮತ್ತು ಸರ್ಕಾರಿ ಕಚೇರಿಗಳಿಗೆ ನಿರಂತರವಾಗಿ ಅಲೆದಾಡಬೇಕಾದ ಸ್ಥಿತಿ ನಿರ್ಮಾಣವಾಗಿದೆ ಎಂದು ಕಣ್ಣೀರಿಟ್ಟರು.

ಪ್ರಕರಣದ ತನಿಖೆಯ ಭಾಗವಾಗಿ ಶಂಕರಗೌಡನ ಮೃತದೇಹವನ್ನು ಸಮಾಧಿಯಿಂದ ಹೊರತೆಗೆದು ಮರುಪರಿಶೀಲನೆ ನಡೆಸಲಾಗಿದ್ದು, ದೇಹದ ಅಂಗಾಂಶಗಳು ಮತ್ತು ಮಣ್ಣಿನ ಮಾದರಿಗಳನ್ನು ವಿಧಿವಿಜ್ಞಾನ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ. ಆದರೆ, ಪ್ರಯೋಗಾಲಯದ ಪರೀಕ್ಷಾ ವರದಿಯ ಬಗ್ಗೆ ಇದುವರೆಗೆ ಅಧಿಕೃತ ಮಾಹಿತಿ ನೀಡಿಲ್ಲ. ವೈಜ್ಞಾನಿಕ ಪರೀಕ್ಷೆಯ ಫಲಿತಾಂಶ ತಿಳಿಯದಿರುವುದರಿಂದ ಸಾವಿನ ಕುರಿತು ಕುಟುಂಬದಲ್ಲಿರುವ ಅನುಮಾನಗಳು ಮತ್ತಷ್ಟು ಹೆಚ್ಚಾಗಿವೆ ಎಂದು ತಿಳಿಸಿದರು.

ಜಾಲಹಳ್ಳಿ ಪೊಲೀಸ್ ಠಾಣೆಯ ಪಿಎಸ್‌ಐ ನೇತೃತ್ವದ ತನಿಖೆಯ ಬಗ್ಗೆ ತಮಗೆ ವಿಶ್ವಾಸವಿಲ್ಲ. ಆದ್ದರಿಂದ ಪ್ರಕರಣವನ್ನು ಹಿರಿಯ ಪೊಲೀಸ್ ಅಧಿಕಾರಿಗೆ ವಹಿಸಿ ಸ್ವತಂತ್ರ ಹಾಗೂ ಪಾರದರ್ಶಕ ತನಿಖೆ ನಡೆಸಬೇಕು. ವಿಧಿವಿಜ್ಞಾನ ಪ್ರಯೋಗಾಲಯದ ವರದಿಯನ್ನು ಶೀಘ್ರ ಪಡೆದು ಪರಿಶೀಲಿಸುವುದರ ಜೊತೆಗೆ ಸಂಬಂಧಪಟ್ಟವರ ಮೊಬೈಲ್ ಕರೆಗಳ ವಿವರಗಳು (ಸಿಡಿಆರ್), ತಾಂತ್ರಿಕ ದಾಖಲೆಗಳು ಹಾಗೂ ಇತರ ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಬೇಕು ಎಂದು ಒತ್ತಾಯಿಸಿದರು.

ಮಗನ ಸಾವು ಆತ್ಮಹತ್ಯೆಯೇ ಅಥವಾ ಅದರ ಹಿಂದೆ ಬೇರೆ ಯಾವುದಾದರೂ ಕಾರಣವಿದೆಯೇ ಎಂಬುದನ್ನು ವೈಜ್ಞಾನಿಕ ತನಿಖೆಯಿಂದ ಸ್ಪಷ್ಟಪಡಿಸಬೇಕು. ಪ್ರಕರಣದಲ್ಲಿ ಯಾರದ್ದೇ ತಪ್ಪು ಸಾಬೀತಾದರೂ ಕಾನೂನಿನ ಪ್ರಕಾರ ಕ್ರಮ ಜರುಗಿಸಬೇಕು. ಸರ್ಕಾರ ಮತ್ತು ಜಿಲ್ಲಾ ಪೊಲೀಸ್ ಇಲಾಖೆ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ನೊಂದ ಕುಟುಂಬಕ್ಕೆ ನ್ಯಾಯ ದೊರಕಿಸಿಕೊಡಬೇಕೆಂದು ಉಮಾದೇವಿ ಮನವಿ ಮಾಡಿದರು.

## ನನ್ನ ಮಗನ ಸಾವಿನ ಸತ್ಯ ಹೊರಬರುವವರೆಗೂ ಹೋರಾಟ ನಿಲ್ಲದು

"ಹತ್ತು ತಿಂಗಳಿಂದ ಮಗನ ಸಾವಿಗೆ ನಿಖರ ಕಾರಣವೇನೆಂದು ತಿಳಿಯಲು ಅಧಿಕಾರಿಗಳ ಬಳಿ ಅಲೆದಾಡುತ್ತಿದ್ದೇನೆ. ನಮ್ಮಂತಹ ಬಡವರ ನೋವನ್ನು ಕೇಳುವವರು ಯಾರು? ಮಗನನ್ನು ಕಳೆದುಕೊಂಡ ದುಃಖದ ನಡುವೆ ನ್ಯಾಯಕ್ಕಾಗಿ ಹೋರಾಡಬೇಕಾದ ಪರಿಸ್ಥಿತಿ ಬಂದಿದೆ. ನನ್ನ ಮಗನ ಸಾವಿನ ಹಿಂದಿರುವ ಸತ್ಯ ಹೊರಬಂದು ನ್ಯಾಯ ದೊರೆಯುವವರೆಗೂ ಹೋರಾಟದಿಂದ ಹಿಂದೆ ಸರಿಯುವುದಿಲ್ಲ" ಎಂದು ಉಮಾದೇವಿ ಅಳಲು ತೋಡಿಕೊಂಡರು.

## ಜಿಲ್ಲಾ ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗದ ಸಂಘಟನಾ ಕಾರ್ಯದರ್ಶಿಯಾಗಿ ವೆಂಕಟೇಶ ಅರೋಲಿಕರ್ ನೇಮಕ



ರಾಯಚೂರು: ಜಿಲ್ಲಾ ಕಾಂಗ್ರೆಸ್ ಸಮಿತಿಯ ಪರಿಶಿಷ್ಟ ಜಾತಿ ವಿಭಾಗದ ಸಂಘಟನಾ ಕಾರ್ಯದರ್ಶಿ ಹುದ್ದೆಗೆ ವೆಂಕಟೇಶ ಅರೋಲಿಕರ್ ಅವರನ್ನು ನೇಮಕ ಮಾಡಲಾಗಿದ್ದು, ಪಕ್ಷದ ಮುಖಂಡರ ಸಮ್ಮುಖದಲ್ಲಿ ನೇಮಕಾತಿ ಆದೇಶ ಪತ್ರ ವಿತರಿಸಲಾಯಿತು.

ನಗರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿಯ ಪರಿಶಿಷ್ಟ ಜಾತಿ ವಿಭಾಗದ ಜಿಲ್ಲಾಧ್ಯಕ್ಷ ಹನುಮಂತ ಜೂಕೂರು ಅವರು ವೆಂಕಟೇಶ ಅರೋಲಿಕರ್ ಅವರಿಗೆ ನೇಮಕಾತಿ ಆದೇಶ ಪತ್ರ ಹಸ್ತಾಂತರಿಸಿದರು.

ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜ್, ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೆ. ಶಾಂತಪ್ಪ, ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎನ್. ಶ್ರೀನಿವಾಸ ರೆಡ್ಡಿ, ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಪರಾಜಿತ ಅಭ್ಯರ್ಥಿ ಮಹಮ್ಮದ್ ಶಾಲಂ ಅವರ ಮಾರ್ಗದರ್ಶನದಲ್ಲಿ ನೇಮಕಾತಿ ಪ್ರಕ್ರಿಯೆ ನಡೆಯಿತು.

ಪಕ್ಷದ ಹಿರಿಯ ಮುಖಂಡರಾದ ಜಿ. ಶಿವಮೂರ್ತಿ, ಜಯಣ್ಣ, ಜಯಂತ್ ರಾವ್ ಪತಂಗೆ, ಕೆಪಿಸಿಸಿ ವಿಭಾಗದ ರಾಜ್ಯ ಸಂಚಾಲಕ ಜಗನ್ನಾಥ ಸುಂಕಾರಿ ಹಾಗೂ ಸಮುದಾಯದ ಹಿರಿಯ ಮುಖಂಡ ತಿಮ್ಮರೆಡ್ಡಿ ಅವರ ಸಹಕಾರದೊಂದಿಗೆ ನೂತನ ಸಂಘಟನಾ ಕಾರ್ಯದರ್ಶಿಯನ್ನು ಆಯ್ಕೆ ಮಾಡಲಾಗಿದೆ.

ಈ ಸಂದರ್ಭದಲ್ಲಿ ರಾಯಚೂರು ನಗರ ಬ್ಲಾಕ್ ಕಾಂಗ್ರೆಸ್ ಸಮಿತಿಯ ಪರಿಶಿಷ್ಟ ಜಾತಿ ವಿಭಾಗದ ಅಧ್ಯಕ್ಷ ವಿಶ್ವನಾಥ ಪಟ್ಟಿ ಸೇರಿದಂತೆ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

## ರೈತನ ಮೇಲೆ ಅರಣ್ಯಾಧಿಕಾರಿಗಳಿಂದ ಹಲ್ಲೆ ಆರೋಪ: ಕಾನೂನು ಕ್ರಮಕ್ಕೆ ಆಗ್ರಹ



ಲಿಂಗಸುಗೂರು: ಮಸ್ಕಿ ತಾಲೂಕಿನ ಯರದೊಡ್ಡಿ ಗ್ರಾಮದ ರೈತನ ಮೇಲೆ ಅರಣ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಹಲ್ಲೆ ನಡೆಸಿ ದೌರ್ಜನ್ಯ ಎಸಗಿದ್ದಾರೆ ಎಂದು ಆರೋಪಿಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಕರ್ನಾಟಕ ರೈತ ಸಂಘ ಹಾಗೂ ಸಿಪಿಐ (ಎಂಎಲ್) ರೆಡ್ ಸ್ಟಾರ್ ತಾಲೂಕು ಸಮಿತಿ ವತಿಯಿಂದ ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರೈತ ಸಂಘದ ತಾಲೂಕು ಅಧ್ಯಕ್ಷ ವೀರಭದ್ರಪ್ಪ ಮಾತನಾಡಿ, ರೈತರು ತಮ್ಮ ಜಮೀನುಗಳಲ್ಲಿ ಕೃಷಿ ಚಟುವಟಿಕೆ ನಡೆಸುವ ಸಂದರ್ಭದಲ್ಲಿ ಅಧಿಕಾರಿಗಳಿಂದ ಕಿರುಕುಳ ಹಾಗೂ ದೌರ್ಜನ್ಯ ನಡೆಯುತ್ತಿರುವ ಆರೋಪಗಳು ಕೇಳಿಬರುತ್ತಿವೆ. ಯರದೊಡ್ಡಿ ಗ್ರಾಮದ ರೈತನ ಮೇಲೆ ನಡೆದಿರುವ ಹಲ್ಲೆ ಆರೋಪವನ್ನು ಜಿಲ್ಲಾಡಳಿತ ಗಂಭೀರವಾಗಿ ಪರಿಗಣಿಸಿ ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಜಮೀನಿನ ಮಾಲೀಕತ್ವಕ್ಕೆ ಸಂಬಂಧಿಸಿದಂತೆ ಕಂದಾಯ ಮತ್ತು ಅರಣ್ಯ ಇಲಾಖೆಗಳ ನಡುವೆ ಗೊಂದಲವಿದ್ದರೆ ಅದನ್ನು ಕಾನೂನುಬದ್ಧವಾಗಿ ಬಗೆಹರಿಸಬೇಕು. ವಿವಾದಿತ ಜಮೀನು ಕಂದಾಯ ಇಲಾಖೆಗೆ ಸೇರಿದ್ದೇ ಅಥವಾ ಅರಣ್ಯ ಇಲಾಖೆಯ ವ್ಯಾಪ್ತಿಗೆ ಒಳಪಟ್ಟಿದೆಯೇ ಎಂಬುದನ್ನು ಪಹಣಿ, ಹಳೆಯ ಕಂದಾಯ ದಾಖಲೆಗಳು ಹಾಗೂ ಸರ್ಕಾರದ ಅಧಿಸೂಚನೆಗಳನ್ನು ಪರಿಶೀಲಿಸಿ ಸ್ಪಷ್ಟಪಡಿಸಬೇಕು. ಯಾವುದೇ ಕಾರಣಕ್ಕೂ ರೈತರ ಮೇಲೆ ಬಲಪ್ರಯೋಗ ನಡೆಸುವುದು ಸರಿಯಲ್ಲ ಎಂದು ಹೇಳಿದರು.

ಘಟನೆಗೆ ಸಂಬಂಧಿಸಿದಂತೆ ಸಮಗ್ರ ತನಿಖೆ ನಡೆಸಿ, ಅಧಿಕಾರಿಗಳು ಕಾನೂನುಬಾಹಿರವಾಗಿ ವರ್ತಿಸಿರುವುದು ಅಥವಾ ಅಧಿಕಾರ ದುರುಪಯೋಗಪಡಿಸಿಕೊಂಡಿರುವುದು ಸಾಬೀತಾದರೆ ಸಂಬಂಧಪಟ್ಟವರ ವಿರುದ್ಧ ಶಿಸ್ತುಕ್ರಮ ಜರುಗಿಸಬೇಕು. ಅಗತ್ಯವಿದ್ದರೆ ತಪ್ಪಿತಸ್ಥ ಅಧಿಕಾರಿಗಳನ್ನು ಅಮಾನತುಗೊಳಿಸಬೇಕು ಎಂದು ಆಗ್ರಹಿಸಿದರು.

ತನಿಖೆ ಪೂರ್ಣಗೊಳ್ಳುವವರೆಗೆ ಸಂಬಂಧಪಟ್ಟ ರೈತರಿಗೆ ಯಾವುದೇ ರೀತಿಯ ಕಿರುಕುಳ ನೀಡದಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಬೇಕು. ಜಮೀನಿಗೆ ಸಂಬಂಧಿಸಿದ ವಿವಾದಗಳನ್ನು ಕಾನೂನು ಪ್ರಕ್ರಿಯೆಯ ಮೂಲಕವೇ ಇತ್ಯರ್ಥಪಡಿಸಬೇಕು. ಅಧಿಕಾರಿಗಳು ತಮ್ಮ ಅಧಿಕಾರವನ್ನು ದುರುಪಯೋಗಪಡಿಸಿಕೊಳ್ಳದಂತೆ ಮೇಲಾಧಿಕಾರಿಗಳು ನಿಗಾ ವಹಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಈ ಪ್ರಕರಣದಲ್ಲಿ ಮಾನವ ಹಕ್ಕುಗಳ ಉಲ್ಲಂಘನೆಯಾಗಿರುವುದು ಕಂಡುಬಂದರೆ ರಾಜ್ಯ ಮಾನವ ಹಕ್ಕುಗಳ ಆಯೋಗವೂ ಮಧ್ಯಪ್ರವೇಶಿಸಿ ತನಿಖೆ ನಡೆಸಬೇಕು. ರೈತನಿಗೆ ನ್ಯಾಯ ಒದಗಿಸುವಲ್ಲಿ ವಿಳಂಬವಾದರೆ ಸಂಘಟನೆಗಳ ವತಿಯಿಂದ ಹೋರಾಟ ನಡೆಸಲಾಗುವುದು ಎಂದು ಮುಖಂಡರು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಸಂಘಟನಾ ಕಾರ್ಯದರ್ಶಿ ರಶೀದ್ ಜಮಾದಾರ್, ತಿಪಣ್ಣ, ಹನಮಂತ ಪೂಜಾರಿ, ಮೌಲಾಸಾಬ ಸೇರಿದಂತೆ ಸಂಘಟನೆಯ ಇತರ ಮುಖಂಡರು ಉಪಸ್ಥಿತರಿದ್ದರು.

## ಮತದಾನದ ಹಕ್ಕು ರಕ್ಷಣೆಗೆ ಆಗ್ರಹಿಸಿ ಜಾಲಹಳ್ಳಿಯಲ್ಲಿ ಡಿವೈಎಫ್‌ಐಎಸ್‌ಎಫ್‌ಐ ಪಂಜಿನ ಮೆರವಣಿಗೆ



ಜಾಲಹಳ್ಳಿ, ಅ.10: ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯನ್ನು ರದ್ದುಗೊಳಿಸಬೇಕು, ಮುಖ್ಯ ಚುನಾವಣಾ ಆಯುಕ್ತ ಗ್ಯಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ವಜಾಗೊಳಿಸಿ ಕಾನೂನು ಕ್ರಮ ಜರುಗಿಸಬೇಕು ಹಾಗೂ ಪ್ರತಿಯೊಬ್ಬ ಅರ್ಹ ನಾಗರಿಕನ ಮತದಾನದ ಹಕ್ಕನ್ನು ರಕ್ಷಿಸಬೇಕು ಎಂದು ಆಗ್ರಹಿಸಿ ಡಿವೈಎಫ್‌ಐ ಮತ್ತು ಎಸ್‌ಎಫ್‌ಐ ಸಂಘಟನೆಗಳ ನೇತೃತ್ವದಲ್ಲಿ ಶನಿವಾರ ಸಂಜೆ ಪಟ್ಟಣದಲ್ಲಿ ಬೃಹತ್ ಪಂಜಿನ ಮೆರವಣಿಗೆ ನಡೆಸಲಾಯಿತು.

ಪಟ್ಟಣದ ಶ್ರೀ ಲಕ್ಷ್ಮೀ ರಂಗನಾಥ ದೇವಸ್ಥಾನದಿಂದ ಆರಂಭವಾದ ಮೆರವಣಿಗೆ ಪ್ರಮುಖ ರಸ್ತೆಗಳ ಮೂಲಕ ಡಾ. ಬಿ.ಆರ್. ಅಂಬೇಡ್ಕರ್ ವೃತ್ತಕ್ಕೆ ತಲುಪಿತು. ಕೈಯಲ್ಲಿ ಪಂಜುಗಳನ್ನು ಹಿಡಿದು ಸಾಗಿದ ವಿದ್ಯಾರ್ಥಿಗಳು, ಯುವಜನರು ಹಾಗೂ ವಿವಿಧ ಸಂಘಟನೆಗಳ ಕಾರ್ಯಕರ್ತರು ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. 'ವೋಟ್ ಚೋರ್ ಗದ್ದಿ ಛೋಡ್', 'ಎಸ್‌ಐಆರ್ ರದ್ದುಗೊಳಿಸಿ', 'ಗ್ಯಾನೇಶ್ ಕುಮಾರ್ ಅವರನ್ನು ವಜಾಗೊಳಿಸಿ' ಎಂಬ ಘೋಷಣೆಗಳು ಮೆರವಣಿಗೆಯಲ್ಲಿ ಮೊಳಗಿದವು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಮುಖಂಡರಾದ ರಾಜ ವಾಸುದೇವ ನಾಯಕ, ವೇಣುಗೋಪಾಲ ಗೌಡ, ನರಸಣ್ಣ ನಾಯಕ, ರಾಜಶೇಖರ ನಾಯಕ, ಗಿರಿಯಪ್ಪ ಪೂಜಾರಿ, ಎಚ್.ಪಿ. ಬಸವರಾಜ, ಪಂಪಾಪತಿ ಹಾಗೂ ಶಬ್ಬೀರ್, ಮತದಾನದ ಹಕ್ಕು ಪ್ರಜಾಪ್ರಭುತ್ವ ವ್ಯವಸ್ಥೆಯ ಮೂಲಾಧಾರವಾಗಿದೆ. ಮತದಾರರ ಪಟ್ಟಿ ಪರಿಷ್ಕರಣೆಯ ಹೆಸರಿನಲ್ಲಿ ಅರ್ಹ ಮತದಾರರ ಹೆಸರುಗಳನ್ನು ಕೈಬಿಡುವ ಆತಂಕ ಎದುರಾಗಿದ್ದು, ಇದನ್ನು ತಡೆಯಲು ಚುನಾವಣಾ ಆಯೋಗ ಸ್ಪಷ್ಟ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಬಡವರು, ಕಾರ್ಮಿಕರು, ಗ್ರಾಮೀಣ ಜನರು ಹಾಗೂ ಸಮಾಜದ ಅಂಚಿನಲ್ಲಿರುವ ಸಮುದಾಯಗಳಿಗೆ ಎಸ್‌ಐಆರ್ ಪ್ರಕ್ರಿಯೆಯಿಂದ ತೊಂದರೆಯಾಗುವ ಸಾಧ್ಯತೆಯಿದೆ. ಮತದಾರರ ಪಟ್ಟಿಯಲ್ಲಿನ ದೋಷಗಳನ್ನು ಸರಿಪಡಿಸುವ ನೆಪದಲ್ಲಿ ಯಾರೊಬ್ಬರೂ ತಮ್ಮ ಮತದಾನದ ಹಕ್ಕನ್ನು ಕಳೆದುಕೊಳ್ಳುವಂತಾಗಬಾರದು. ಚುನಾವಣಾ ಆಯೋಗವು ಯಾವುದೇ ರಾಜಕೀಯ ಒತ್ತಡಕ್ಕೆ ಒಳಗಾಗದೆ ಪಾರದರ್ಶಕವಾಗಿ ಹಾಗೂ ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸಬೇಕು ಎಂದು ಆಗ್ರಹಿಸಿದರು.

ಪ್ರಜಾಪ್ರಭುತ್ವದಲ್ಲಿ ಜನರ ಅಭಿಪ್ರಾಯ ಮತ್ತು ಪ್ರತಿಭಟಿಸುವ ಹಕ್ಕಿಗೆ ಗೌರವ ನೀಡಬೇಕು. ಆದರೆ ಮತದಾನದ ಹಕ್ಕಿನ ರಕ್ಷಣೆಗಾಗಿ ಧ್ವನಿ ಎತ್ತುತ್ತಿರುವ ವಿದ್ಯಾರ್ಥಿ ಹಾಗೂ ಯುವಜನ ಸಂಘಟನೆಗಳ ಹೋರಾಟವನ್ನು ಹತ್ತಿಕ್ಕಲು ಕೇಂದ್ರ ಸರ್ಕಾರ ಮುಂದಾಗಿದೆ ಎಂದು ಮುಖಂಡರು ಆರೋಪಿಸಿದರು. ಇಂತಹ ಕ್ರಮಗಳು ಪ್ರಜಾಪ್ರಭುತ್ವದ ಆಶಯಗಳಿಗೆ ವಿರುದ್ಧವಾಗಿದ್ದು, ಜನರ ಹಕ್ಕುಗಳನ್ನು ರಕ್ಷಿಸುವ ಜವಾಬ್ದಾರಿಯಿಂದ ಸರ್ಕಾರ ನುಣುಚಿಕೊಳ್ಳಬಾರದು ಎಂದು ಹೇಳಿದರು.

ಎಸ್‌ಐಆರ್ ಪ್ರಕ್ರಿಯೆಯನ್ನು ಕೈಬಿಡುವವರೆಗೂ ಹಾಗೂ ಮತದಾನದ ಹಕ್ಕಿನ ರಕ್ಷಣೆಗೆ ಸೂಕ್ತ ಕ್ರಮ ಕೈಗೊಳ್ಳುವವರೆಗೂ ವಿದ್ಯಾರ್ಥಿ ಮತ್ತು ಯುವಜನ ಸಂಘಟನೆಗಳ ಹೋರಾಟ ಮುಂದುವರಿಯಲಿದೆ ಎಂದು ಎಚ್ಚರಿಸಿದರು.

ಡಿವೈಎಫ್‌ಐ ಮುಖಂಡ ರಾಜು ನಾಯಕ ಕಾರ್ಯಕ್ರಮ ನಿರೂಪಿಸಿದರು. ಪ್ರತಿಭಟನೆಯಲ್ಲಿ ಡಿವೈಎಫ್‌ಐ, ಎಸ್‌ಎಫ್‌ಐ, ಕೆಪಿಆರ್‌ಎಸ್ ಸಂಘಟನೆಗಳ ಪದಾಧಿಕಾರಿಗಳು, ಕಾಂಗ್ರೆಸ್ ಮುಖಂಡರು, ವಿದ್ಯಾರ್ಥಿಗಳು ಹಾಗೂ ಯುವಜನರು ಭಾಗವಹಿಸಿದ್ದರು.

## ಅಂತರ ಮಹಾವಿದ್ಯಾಲಯ ಟೇಬಲ್ ಟೆನ್ನಿಸ್ ಪಂದ್ಯಾವಳಿಯಲ್ಲಿ ಇಳಕಲ್ ಮಹಿಳಾ ಕಾಲೇಜಿಗೆ ಪ್ರಥಮ ಸ್ಥಾನ



ರಾಯಚೂರು, ಅ.9: ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಹಾಗೂ ವಿಜಯಪುರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಸಹಯೋಗದಲ್ಲಿ ಆಯೋಜಿಸಿದ್ದ 2026-27ನೇ ಸಾಲಿನ ಅಂತರ ಮಹಾವಿದ್ಯಾಲಯಗಳ ಟೇಬಲ್ ಟೆನ್ನಿಸ್ ಪಂದ್ಯಾವಳಿಯಲ್ಲಿ ಇಳಕಲ್‌ನ ಶ್ರೀ ವಿಜಯ ಮಹಾಂತೇಶ ಕಲಾ ಮತ್ತು ವಾಣಿಜ್ಯ ಮಹಿಳಾ ಮಹಾವಿದ್ಯಾಲಯದ ತಂಡ ಪ್ರಥಮ ಸ್ಥಾನ ಪಡೆದು ಗಮನಾರ್ಹ ಸಾಧನೆ ಮಾಡಿದೆ.

ಪಂದ್ಯಾವಳಿಯಲ್ಲಿ ವಿವಿಧ ಕಾಲೇಜುಗಳ ಏಳು ತಂಡಗಳು ಭಾಗವಹಿಸಿದ್ದು, ವಿದ್ಯಾರ್ಥಿನಿಯರು ತಮ್ಮ ಕ್ರೀಡಾ ಕೌಶಲ್ಯ ಪ್ರದರ್ಶಿಸಿದರು. ಇಳಕಲ್‌ನ ಶ್ರೀ ವಿಜಯ ಮಹಾಂತೇಶ ಕಲಾ ಮತ್ತು ವಾಣಿಜ್ಯ ಮಹಿಳಾ ಮಹಾವಿದ್ಯಾಲಯ ಪ್ರಥಮ ಸ್ಥಾನ, ಕಲಬುರಗಿಯ ಶ್ರೀಮತಿ ವೀರಮ್ಮ ಗಂಗಸಿರಿ ಮಹಿಳಾ ಮಹಾವಿದ್ಯಾಲಯ ದ್ವಿತೀಯ ಸ್ಥಾನ ಹಾಗೂ ಕಲಬುರಗಿಯ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ತೃತೀಯ ಸ್ಥಾನ ಪಡೆದುಕೊಂಡವು. ಇದೇ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಟೇಬಲ್ ಟೆನ್ನಿಸ್ ತಂಡದ ಆಯ್ಕೆ ಪ್ರಕ್ರಿಯೆಯೂ ನಡೆಯಿತು.

ಪಂದ್ಯಾವಳಿಯ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ರಾಯಚೂರಿನ ಅಲ್ ಕರೀಮ್ ಮಹಿಳಾ ಪದವಿ ಕಾಲೇಜಿನ ಪ್ರಾಂಶುಪಾಲೆ ಹಾಗೂ ಕ್ರೀಡಾಪಟು ಸಲೀಮುನ್ನೀಸಾ ಸಲ್ಮಾ ಬೇಗಂ ಮಾತನಾಡಿ, ವಿದ್ಯಾರ್ಥಿನಿಯರು ಪಠ್ಯ ಚಟುವಟಿಕೆಗಳಿಗೆ ಸೀಮಿತವಾಗದೆ ಕ್ರೀಡೆಗಳಲ್ಲಿಯೂ ಆಸಕ್ತಿ ಬೆಳೆಸಿಕೊಳ್ಳಬೇಕು. ಕ್ರೀಡೆಯಿಂದ ದೈಹಿಕ ಸಾಮರ್ಥ್ಯದ ಜೊತೆಗೆ ಶಿಸ್ತು, ಆತ್ಮವಿಶ್ವಾಸ ಹಾಗೂ ಸ್ಪರ್ಧಾತ್ಮಕ ಮನೋಭಾವ ವೃದ್ಧಿಯಾಗುತ್ತದೆ. ನಿರಂತರ ಅಭ್ಯಾಸ ಮತ್ತು ಪರಿಶ್ರಮದಿಂದ ಉತ್ತಮ ಸಾಧನೆ ಮಾಡಲು ಸಾಧ್ಯ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಂಶುಪಾಲೆ ಡಾ. ಸುಗುಣ ಬಸವರಾಜ ಮಾತನಾಡಿ, ಕ್ರೀಡೆಯಲ್ಲಿ ಗೆಲುವು ಮತ್ತು ಸೋಲು ಸಹಜ. ಸೋಲಿನಿಂದ ನಿರಾಶರಾಗದೆ ಮುಂದಿನ ಸ್ಪರ್ಧೆಗಳಿಗೆ ಇನ್ನಷ್ಟು ಉತ್ತಮವಾಗಿ ಸಿದ್ಧತೆ ಮಾಡಿಕೊಳ್ಳಬೇಕು. ಪ್ರತಿಯೊಂದು ಪಂದ್ಯಾವಳಿಯೂ ಕ್ರೀಡಾಪಟುಗಳಿಗೆ ಹೊಸ ಅನುಭವ ನೀಡುತ್ತದೆ ಎಂದು ತಿಳಿಸಿದರು. ವಿಜೇತ ತಂಡಗಳನ್ನು ಅಭಿನಂದಿಸಿದ ಅವರು, ಪಂದ್ಯಾವಳಿಯ ಯಶಸ್ಸಿಗೆ ಶ್ರಮಿಸಿದ ದೈಹಿಕ ಶಿಕ್ಷಣ ನಿರ್ದೇಶಕರು ಹಾಗೂ ಸಿಬ್ಬಂದಿಯ ಕಾರ್ಯವನ್ನು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ಸಿಬ್ಬಂದಿ ಕಾರ್ಯದರ್ಶಿ ಡಾ. ಸೈಯಿದಾ ರಷೀದಾ ಪರವಿನ್, ತೀರ್ಪುಗಾರ ಹಾಗೂ ಟೇಬಲ್ ಟೆನ್ನಿಸ್ ಕ್ರೀಡಾಪಟು ಈರಣ್ಣ, ಆಯ್ಕೆ ಸಮಿತಿ ಸದಸ್ಯರಾದ ಕಲಬುರಗಿ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ದೈಹಿಕ ಶಿಕ್ಷಣ ನಿರ್ದೇಶಕಿ ಡಾ. ಜ್ಯೋತಿ ನಾಗೇಂದ್ರಪ್ಪ, ಇಳಕಲ್‌ನ ಎಸ್‌ವಿಎಂ ಮಹಿಳಾ ಮಹಾವಿದ್ಯಾಲಯದ ದೈಹಿಕ ಶಿಕ್ಷಣ ನಿರ್ದೇಶಕ ಗಂಗಾಧರ, ರಾಯಚೂರಿನ ಎಸ್‌ಎಸ್‌ಆರ್‌ಜಿ ಮಹಿಳಾ ಮಹಾವಿದ್ಯಾಲಯದ ದೈಹಿಕ ಶಿಕ್ಷಣ ನಿರ್ದೇಶಕಿ ಡಾ. ಕಸ್ತೂರಿ ರಜಪೂತ್ ಉಪಸ್ಥಿತರಿದ್ದರು.

ಕಾಲೇಜಿನ ಸಹ ಪ್ರಾಧ್ಯಾಪಕರಾದ ಶರಣಗೌಡ ಕೆ., ಡಾ. ಸ್ವರೂಪರಾಣಿ, ಗ್ರಂಥಪಾಲಕ ಡಾ. ಸುರೇಶ ಎಸ್. ಹಾಗೂ ಅತಿಥಿ ಉಪನ್ಯಾಸಕರು ಭಾಗವಹಿಸಿದ್ದರು. ಕನ್ನಡ ವಿಭಾಗದ ಅತಿಥಿ ಉಪನ್ಯಾಸಕ ಡಾ. ಅಳ್ಳಪ್ಪ ಕಾರ್ಯಕ್ರಮ ನಿರೂಪಿಸಿದರು. ಆಂಗ್ಲ ವಿಭಾಗದ ಅತಿಥಿ ಉಪನ್ಯಾಸಕ ಗುರುರಾಜ ಸ್ವಾಗತಿಸಿದರು. ದೈಹಿಕ ಶಿಕ್ಷಣ ನಿರ್ದೇಶಕ ಡಾ. ಪ್ರಸನ್ನ ಕುಮಾರ್ ವಂದಿಸಿದರು. ವಿದ್ಯಾರ್ಥಿನಿಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

## ರಾಮತ್ನಾಳ ಶಾಲೆಯ ಖೋ ಖೋ ತಂಡಕ್ಕೆ ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ



ರಾಯಚೂರು, ಅ.10: ಮಸ್ಕಿಯಲ್ಲಿ ಅಕ್ಟೋಬರ್ 6ರಂದು ಆಯೋಜಿಸಲಾಗಿದ್ದ 14 ವರ್ಷದೊಳಗಿನವರ ಜಿಲ್ಲಾ ಮಟ್ಟದ ಖೋ ಖೋ ಪಂದ್ಯಾವಳಿಯಲ್ಲಿ ರಾಮತ್ನಾಳ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಅತ್ಯುತ್ತಮ ಪ್ರದರ್ಶನ ನೀಡಿ ಪ್ರಥಮ ಸ್ಥಾನ ಗಳಿಸುವ ಮೂಲಕ ವಿಭಾಗ ಮಟ್ಟದ ಪಂದ್ಯಾವಳಿಗೆ ಆಯ್ಕೆಯಾಗಿದ್ದಾರೆ.

ಪಂದ್ಯಾವಳಿಯಲ್ಲಿ ತಂಡದ ಆಟಗಾರರು ಸಂಘಟಿತ ಹೋರಾಟ, ಚುರುಕಿನ ಆಟ ಹಾಗೂ ಉತ್ತಮ ಕ್ರೀಡಾ ಕೌಶಲ ಪ್ರದರ್ಶಿಸಿ ಗಮನ ಸೆಳೆದರು. ವಿಶೇಷವಾಗಿ ತಂಡದ ನಾಯಕ ಮನೋಜ್ ಉತ್ತಮ ಪ್ರದರ್ಶನ ನೀಡುವ ಮೂಲಕ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದರು.

ವಿದ್ಯಾರ್ಥಿಗಳ ಈ ಸಾಧನೆಯ ಹಿಂದೆ ಶಾಲೆಯ ಮುಖ್ಯಗುರು ಶರಣಪ್ಪ, ಹಿರಿಯ ಶಿಕ್ಷಕ ಅಯ್ಯಪ್ಪ ಹಾಗೂ ತಂಡಕ್ಕೆ ತರಬೇತಿ ನೀಡಿದ ಅತಿಥಿ ಶಿಕ್ಷಕರಾದ ಬಸವಲಿಂಗಯ್ಯ (ಅಜಿತ್), ಹನುಮೇಶ ಮರಕಮದಿನ್ನಿ, ದೇವರಾಜ್, ಮಹೇಶ, ಮಹಾಂತೇಶ ಗೊರ್ಕಲ್, ಮೌನೇಶ ಮರಕಮದಿನ್ನಿ, ಕರಿಯಪ್ಪ ಶಿಳ್ಳೆಕ್ಯಾತರು ಮತ್ತು ಬಸವಲಿಂಗಪ್ಪ ದೇಸಾಯಿ ಅವರ ಮಾರ್ಗದರ್ಶನ ಹಾಗೂ ಪರಿಶ್ರಮವಿದೆ.

ವಿದ್ಯಾರ್ಥಿಗಳ ಸಾಧನೆಗೆ ಸಂತಸ ವ್ಯಕ್ತಪಡಿಸಿದ ಅಮರೇಶ ಶಿಳ್ಳೆಕ್ಯಾತರು, ವಿಜೇತ ತಂಡದ ಆಟಗಾರರಿಗೆ ವಿಶೇಷ ಭೋಜನ ವ್ಯವಸ್ಥೆ ಮಾಡಿ ಪ್ರೋತ್ಸಾಹಿಸಿದರು.

ಗ್ರಾಮೀಣ ಭಾಗದ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳು ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ವಿಭಾಗ ಮಟ್ಟಕ್ಕೆ ಆಯ್ಕೆಯಾಗಿರುವುದು ಗ್ರಾಮಕ್ಕೆ ಹೆಮ್ಮೆ ತಂದಿದೆ. ವಿದ್ಯಾರ್ಥಿಗಳ ಸಾಧನೆಗೆ ಗ್ರಾಮದ ಕ್ರೀಡಾಪ್ರೇಮಿಗಳು, ಗುರುಹಿರಿಯರು ಹಾಗೂ ಸಾರ್ವಜನಿಕರು ಅಭಿನಂದನೆ ಸಲ್ಲಿಸಿದ್ದು, ಮುಂದಿನ ವಿಭಾಗ ಮಟ್ಟದ ಪಂದ್ಯಾವಳಿಯಲ್ಲಿಯೂ ಉತ್ತಮ ಪ್ರದರ್ಶನ ನೀಡಿ ಶಾಲೆ ಹಾಗೂ ಜಿಲ್ಲೆಯ ಕೀರ್ತಿ ಹೆಚ್ಚಿಸಲಿ ಎಂದು ಶುಭ ಹಾರೈಸಿದ್ದಾರೆ.

**ಗಾಣೇಕಲ್ ಜಲಾಶಯದಿಂದ ನೀರು ಬಿಡುಗಡೆ: ಕುಡಿಯುವ ನೀರು, ಕೃಷಿಗೆ ಮೊದಲ ಆದ್ಯತೆ: ಶಾಸಕ ಬಸನಗೌಡ ದದ್ದಲ್**

ರಾಯಚೂರು: ಸಾರ್ವಜನಿಕರ ಕುಡಿಯುವ ನೀರಿನ ಅಗತ್ಯತೆ ಪೂರೈಸುವುದರ ಜೊತೆಗೆ ರೈತರ ಕೃಷಿ ಚಟುವಟಿಕೆಗಳಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ಗಾಣೇಕಲ್ ಜಲಾಶಯದಿಂದ ಕಾಲುವೆಗಳಿಗೆ ನೀರು ಹರಿಸಲಾಗುತ್ತಿದೆ ಎಂದು ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ತಿಳಿಸಿದರು.

ಗಾಣೇಕಲ್ ಜಲಾಶಯದಿಂದ 99ಎ, 100, 102 ಹಾಗೂ 102ಎ ಕಾಲುವೆಗಳ ಮೂಲಕ ನೀರು ಬಿಡುಗಡೆ ಮಾಡಲಾಗಿದ್ದು, ರಾಯಚೂರು ನಗರದ ಕೆಳಭಾಗದ ಪ್ರದೇಶಗಳಿಗೆ ಕುಡಿಯುವ ನೀರು ಒದಗಿಸುವುದರೊಂದಿಗೆ ಕಾಲುವೆ ವ್ಯಾಪ್ತಿಯ ರೈತರ ಬೆಳೆಗಳಿಗೂ ನೀರಾವರಿ ಸೌಲಭ್ಯ ದೊರೆಯಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ನೀರು ಪೂರೈಕೆ ಹಾಗೂ ಕಾಲುವೆಗಳ ನಿರ್ವಹಣೆ ಕುರಿತು ಚರ್ಚಿಸಿದ ಶಾಸಕರು, ಜಲಾಶಯದಿಂದ ಬಿಡುಗಡೆಯಾಗುವ ನೀರು ನಿಗದಿತ ಪ್ರದೇಶಗಳಿಗೆ ಸಮರ್ಪಕವಾಗಿ ತಲುಪುವಂತೆ ಕ್ರಮ ಕೈಗೊಳ್ಳಬೇಕು. ನೀರಿನ ಹರಿವಿನ ಮೇಲೆ ನಿರಂತರ ನಿಗಾ ಇರಿಸುವುದರ ಜೊತೆಗೆ ಅನಗತ್ಯ ಪೋಲು ತಡೆಗಟ್ಟಲು ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು.

ಕುಡಿಯುವ ನೀರಿನ ವಿತರಣೆಯಲ್ಲಿ ಯಾವುದೇ ಅಡಚಣೆ ಉಂಟಾಗದಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ರೈತರು ಬೆಳೆದಿರುವ ಬೆಳೆಗಳಿಗೆ ಅಗತ್ಯವಿರುವ ನೀರು ಲಭ್ಯವಾಗುವಂತೆ ಕಾಲುವೆಗಳಲ್ಲಿ ನೀರಿನ ಹರಿವನ್ನು ವ್ಯವಸ್ಥಿತವಾಗಿ ನಿರ್ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಸಾರ್ವಜನಿಕರಿಗೆ ಕುಡಿಯುವ ನೀರಿನ ಕೊರತೆ ಎದುರಾಗದಂತೆ ನೋಡಿಕೊಳ್ಳುವುದು ಹಾಗೂ ರೈತರ ಕೃಷಿ ಚಟುವಟಿಕೆಗಳಿಗೆ ಅಗತ್ಯ ನೀರಾವರಿ ಸೌಲಭ್ಯ ಒದಗಿಸುವುದು ನಮ್ಮ ಪ್ರಮುಖ ಆದ್ಯತೆಯಾಗಿದೆ. ಲಭ್ಯವಿರುವ ಜಲಸಂಪನ್ಮೂಲವನ್ನು ಸಮರ್ಪಕವಾಗಿ ಬಳಸಿಕೊಂಡು ಜನರು ಮತ್ತು ರೈತರಿಗೆ ಅನುಕೂಲ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕ ಬಸನಗೌಡ ದದ್ದಲ್ ತಿಳಿಸಿದರು.

ಈ ಸಂದರ್ಭದಲ್ಲಿ ಶಿವಪ್ಪ ನಾಯಕ, ಚೆನ್ನಬಸವ, ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಉಪಸ್ಥಿತರಿದ್ದರು.

## ಬಡತನದ ನಡುವೆಯೂ ಸಾಧನೆ ಮಾಡಿದ ಚನ್ನಬಸವ: ರಾಜ್ಯಮಟ್ಟದ ಓಟದಲ್ಲಿ ದ್ವಿತೀಯ ಸ್ಥಾನ, ರಾಷ್ಟ್ರಮಟ್ಟಕ್ಕೆ ಆಯ್ಕೆ



ಅರಕೇರಾ: ಮಳೆ ಬಂದರೆ ಮನೆಯೊಳಗೆ ನೀರು ನುಗ್ಗುವ ಪರಿಸ್ಥಿತಿ, ದಿನವಿಡೀ ದುಡಿದರೂ ಕುಟುಂಬ ನಿರ್ವಹಣೆಗೆ ಸಾಲದ ಕೂಲಿ ಹಣ, ಓದಲು ಬೇಕಾದ ಬಟ್ಟೆ ಮತ್ತು ಶೂ ಖರೀದಿಸಲೂ ಪರದಾಟ. ಇಂತಹ ಕಡುಬಡತನದ ನಡುವೆ ಬೆಳೆದ ಯುವಕನೊಬ್ಬ ಇಂದು ರಾಜ್ಯಮಟ್ಟದ ಓಟದ ಸ್ಪರ್ಧೆಯಲ್ಲಿ ಸಾಧನೆ ಮಾಡಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ರಾಯಚೂರು ಜಿಲ್ಲೆಯ ಅರಕೇರಾ ತಾಲೂಕಿನ ಚಡಕಲಗುಡ್ಡ ಗ್ರಾಮದ ಭೀಮರಾಯ ಅವರ ಪುತ್ರ ಚನ್ನಬಸವ ಈ ಸಾಧನೆ ಮಾಡಿದ ಯುವಕ.

ಉಡುಪಿ ಜಿಲ್ಲೆಯ ಸರ್ಕಾರಿ ಬೋರ್ಡ್ ಪಿಯು ಕಾಲೇಜಿನಲ್ಲಿ ಪ್ರಥಮ ಪಿಯುಸಿ ವ್ಯಾಸಂಗ ಮಾಡುತ್ತಿರುವ ಚನ್ನಬಸವ, ಅಕ್ಟೋಬರ್ 6 ಮತ್ತು 7ರಂದು ತುಮಕೂರಿನ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ನಡೆದ 18 ವರ್ಷದೊಳಗಿನವರ ರಾಜ್ಯಮಟ್ಟದ ಅಥ್ಲೆಟಿಕ್ಸ್ ಪಂದ್ಯಾವಳಿಯ 1000 ಮೀಟರ್ ಓಟದಲ್ಲಿ ದ್ವಿತೀಯ ಸ್ಥಾನ ಪಡೆದು ರಾಷ್ಟ್ರಮಟ್ಟದ ಸ್ಪರ್ಧೆಗೆ ಅರ್ಹತೆ ಗಳಿಸಿದ್ದಾರೆ.

ಚನ್ನಬಸವ ಅವರ ಕುಟುಂಬದ ಆರ್ಥಿಕ ಪರಿಸ್ಥಿತಿ ಹತ್ತು ವರ್ಷಗಳ ಹಿಂದೆ ಅತ್ಯಂತ ಶೋಚನೀಯವಾಗಿತ್ತು. ಮಳೆಗಾಲದಲ್ಲಿ ಮನೆಯೊಳಗೆ ನೀರು ನುಗ್ಗುತ್ತಿತ್ತು. ತಂದೆ ದಿನವಿಡೀ ಕೂಲಿ ಕೆಲಸ ಮಾಡಿದರೂ ಸಿಗುತ್ತಿದ್ದದ್ದು ಕೇವಲ 300 ರೂಪಾಯಿ. ಅಲ್ಪ ಆದಾಯದಲ್ಲಿ ಕುಟುಂಬದ ಜೀವನ ನಿರ್ವಹಣೆಯೊಂದಿಗೆ ಮಕ್ಕಳ ವಿದ್ಯಾಭ್ಯಾಸಕ್ಕೂ ಹಣ ಹೊಂದಿಸುವುದು ತಂದೆ-ತಾಯಿಗೆ ದೊಡ್ಡ ಸವಾಲಾಗಿತ್ತು.

ಶಾಲೆಗೆ ಬೇಕಾದ ಬಟ್ಟೆ, ಶೂ ಹಾಗೂ ಇತರ ಅಗತ್ಯ ವಸ್ತುಗಳನ್ನು ಕೊಡಿಸಲು ತಂದೆ-ತಾಯಿ ಅನುಭವಿಸುತ್ತಿದ್ದ ಕಷ್ಟವನ್ನು ಚನ್ನಬಸವ ಬಾಲ್ಯದಿಂದಲೇ ನೋಡುತ್ತಾ ಬೆಳೆದಿದ್ದಾರೆ. ಎಂಟನೇ ತರಗತಿಯಲ್ಲಿ ಓದುತ್ತಿದ್ದಾಗಲೇ ಜೀವನದಲ್ಲಿ ಏನಾದರೂ ಸಾಧಿಸಿ ಕುಟುಂಬದ ಪರಿಸ್ಥಿತಿಯನ್ನು ಬದಲಾಯಿಸಬೇಕು ಎಂಬ ಛಲ ಅವರಲ್ಲಿ ಮೂಡಿತ್ತು. ಆರ್ಥಿಕ ಸಂಕಷ್ಟದ ನಡುವೆಯೂ ಓದು ಮತ್ತು ಕ್ರೀಡಾಭ್ಯಾಸವನ್ನು ಮುಂದುವರಿಸಿದ ಅವರು, ಈಗ ರಾಜ್ಯಮಟ್ಟದಲ್ಲಿ ತಮ್ಮ ಪ್ರತಿಭೆಯನ್ನು ಸಾಬೀತುಪಡಿಸಿದ್ದಾರೆ.

ತಮ್ಮ ಸಾಧನೆಯ ಕುರಿತು ಮಾತನಾಡಿರುವ ಚನ್ನಬಸವ, ಜೀವನದಲ್ಲಿ ಎದುರಾದ ಬಡತನವೇ ಸಾಧನೆ ಮಾಡುವ ಛಲಕ್ಕೆ ಕಾರಣವಾಯಿತು. ಕಷ್ಟಗಳು ಬಂದಾಗ ಧೈರ್ಯ ಕಳೆದುಕೊಂಡು ನಿಲ್ಲಬಾರದು. ಅವುಗಳನ್ನು ಎದುರಿಸಿ ಮುನ್ನಡೆದರೆ ಸಾಧನೆ ಮಾಡಲು ಸಾಧ್ಯ. ನನ್ನಂತೆ ಕಷ್ಟದ ಪರಿಸ್ಥಿತಿಯಲ್ಲಿ ಬದುಕುತ್ತಿರುವ ಯುವಕರು ತಮ್ಮ ಕನಸುಗಳನ್ನು ಕೈಬಿಡಬಾರದು ಎಂದು ಹೇಳಿದ್ದಾರೆ.

ಇಂದು ತಾವು ಈ ಹಂತಕ್ಕೆ ತಲುಪಲು ಬಾಲ್ಯದಲ್ಲಿ ಅನುಭವಿಸಿದ ಸಂಕಷ್ಟಗಳೂ ಕಾರಣವಾಗಿವೆ. ಆ ದಿನಗಳ ಕಷ್ಟವೇ ಜೀವನದಲ್ಲಿ ಏನಾದರೂ ಸಾಧಿಸಬೇಕೆಂಬ ದೃಢನಿರ್ಧಾರ ಮೂಡಿಸಿತು ಎಂದು ತಮ್ಮ ಅನುಭವ ಹಂಚಿಕೊಂಡಿದ್ದಾರೆ.

ತಮ್ಮ ಕ್ರೀಡಾ ಸಾಧನೆಗೆ ಮಾರ್ಗದರ್ಶನ ಹಾಗೂ ಪ್ರೋತ್ಸಾಹ ನೀಡಿದ ದೇವಣ್ಣ ನಾಯಕ್, ಮಂಜುನಾಥ್ ಬಿ.ಜೆ., ಅಶ್ವಿತಾ, ಮುರಳಿ, ಉಡುಪಿ ಮತ್ತು ಕೊಡಗು ಜಿಲ್ಲೆಗಳ ಶಿಕ್ಷಕರು ಹಾಗೂ ಚಡಕಲಗುಡ್ಡ ಗ್ರಾಮದ ಜನರಿಗೆ ಚನ್ನಬಸವ ಕೃತಜ್ಞತೆ ಸಲ್ಲಿಸಿದ್ದಾರೆ.

ಗ್ರಾಮೀಣ ಪ್ರದೇಶದ ಬಡ ಕುಟುಂಬದಿಂದ ಬಂದ ಚನ್ನಬಸವ ರಾಜ್ಯಮಟ್ಟದಲ್ಲಿ ಸಾಧನೆ ಮಾಡಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿರುವುದು ಚಡಕಲಗುಡ್ಡ ಗ್ರಾಮಸ್ಥರಲ್ಲಿ ಸಂತಸ ಮೂಡಿಸಿದೆ. ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿಯೂ ಉತ್ತಮ ಪ್ರದರ್ಶನ ನೀಡಿ ಜಿಲ್ಲೆಗೆ ಕೀರ್ತಿ ತರಲಿ ಎಂದು ಗ್ರಾಮಸ್ಥರು ಹಾಗೂ ಕ್ರೀಡಾಭಿಮಾನಿಗಳು ಶುಭ ಹಾರೈಸಿದ್ದಾರೆ.

## ತ್ರಿಂಬಕೇಶ್ವರ ದೇವಸ್ಥಾನದ ಜಾಗದಲ್ಲಿ ಹಕ್ಕುಪತ್ರ ವಿತರಣೆ: ಗ್ರಾಮಸ್ಥರ ಆಕ್ರೋಶ



ಕವಿತಾಳ: ಪಟ್ಟಣದ ತ್ರಿಂಬಕೇಶ್ವರ ದೇವಸ್ಥಾನದ ಅಭಿವೃದ್ಧಿಗೆ ಮೀಸಲಿಟ್ಟಿರುವ ಗ್ರಾಮಠಾಣಾ ಜಾಗದಲ್ಲಿ ಆಕ್ಷೇಪಣೆಗಳ ನಡುವೆಯೂ 40ಕ್ಕೂ ಹೆಚ್ಚು ಮಂದಿಗೆ ಹಕ್ಕುಪತ್ರ ವಿತರಿಸಲಾಗಿದೆ ಎಂದು ಆರೋಪಿಸಿ ದೇವಸ್ಥಾನ ಸಮಿತಿ ಪದಾಧಿಕಾರಿಗಳು ಹಾಗೂ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದರು.

ಪತ್ರಿಕಾಗೋಷ್ಠಿಯಲ್ಲಿ ದೇವಸ್ಥಾನ ಸಮಿತಿ ಅಧ್ಯಕ್ಷ ಗಂಗಪ್ಪ ದಿನ್ನಿ ಹಾಗೂ ಕಾರ್ಯದರ್ಶಿ ಅಲ್ಲಮಪ್ರಭು ಕಲಶೆಟ್ಟಿ ಮಾತನಾಡಿ, 2014ರಲ್ಲಿ ಗ್ರಾಮ ಪಂಚಾಯಿತಿ ಆಡಳಿತ ಮಂಡಳಿಯು ಈ ಜಾಗವನ್ನು ದೇವಸ್ಥಾನದ ಅಭಿವೃದ್ಧಿ ಹಾಗೂ ಸಾರ್ವಜನಿಕ ಉದ್ದೇಶಗಳಿಗೆ ಮೀಸಲಿಟ್ಟಿತ್ತು. ಆದರೆ ಸ್ಥಳೀಯ ಶಾಸಕರ ಗಮನಕ್ಕೂ ತರದೆ, ದೇವಸ್ಥಾನ ಸಮಿತಿಯ ಆಕ್ಷೇಪಣೆಗಳನ್ನು ಪರಿಗಣಿಸದೆ ಅಧಿಕಾರಿಗಳು ಹಕ್ಕುಪತ್ರ ವಿತರಿಸಿದ್ದಾರೆ ಎಂದು ಆರೋಪಿಸಿದರು.

ಬಡವರಿಗೆ ನಿವೇಶನ ನೀಡುವುದಕ್ಕೆ ವಿರೋಧವಿಲ್ಲ. ಆದರೆ ಈಗಾಗಲೇ ನಿರ್ಗತಿಕರಿಗೆ ಬೋಸರಾಜು ಕಾಲೋನಿಯಲ್ಲಿ ಜಾಗ ನೀಡಲಾಗಿದೆ. ದೇವಸ್ಥಾನದ ಜಾಗವನ್ನು ಕೊಳಗೇರಿ ಅಭಿವೃದ್ಧಿ ನಿಗಮದ ವ್ಯಾಪ್ತಿಗೆ ಸೇರಿಸಿರುವ ದಾಖಲೆಗಳನ್ನು ಬಹಿರಂಗಪಡಿಸಬೇಕು. 8 ಎಕರೆ 8 ಗುಂಟೆ ಜಾಗದ ಕುರಿತು ಸಮರ್ಪಕ ಸರ್ವೆ ನಡೆಸದೆ ಹಕ್ಕುಪತ್ರ ವಿತರಿಸಿರುವ ಬಗ್ಗೆ ತನಿಖೆಯಾಗಬೇಕು ಎಂದು ಒತ್ತಾಯಿಸಿದರು.

ಜಿಲ್ಲಾಧಿಕಾರಿಗಳು ಕೂಡಲೇ ಮಧ್ಯಪ್ರವೇಶಿಸಿ ಜಾಗದ ದಾಖಲೆಗಳನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಈಶಪ್ಪ ಸಾಹುಕಾರ, ರಮೇಶ ಮಿಶ್ರ, ತಿಪ್ಪಯ್ಯಸ್ವಾಮಿ, ಮಲ್ಲಿಕಾರ್ಜುನಗೌಡ, ಈರಣ್ಣ ಕೆಳಗೇರಿ, ವೆಂಕಟೇಶ ಅರಕೇರಿ, ಓನಪ್ಪ ಕಡತಲ್, ಹನುಮಂತ ಅರಕೇರಿ, ಆನಂದ, ಮೌನೇಶ ಕಟ್ಟಿಮನಿ, ಅಮರೇಶ, ಅಮರೇಶ ಭೋವಿ, ತಾಯಪ್ಪ ಯಾದವ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಅರಕೇರಾ ತಾಲೂಕಿಗೆ ಗ್ರಾಮಗಳ ಸೇರ್ಪಡೆ ವಿರೋಧಿಸಿ ಅ.12ರಂದು ಬೃಹತ್ ಪಾದಯಾತ್ರೆ



ದೇವದುರ್ಗ, ಅ.10: ನೂತನ ಅರಕೇರಾ ತಾಲೂಕಿಗೆ ಸೇರ್ಪಡೆಗೊಳಿದ ಗಾಣಧಾಳ ಹಾಗೂ ಸೋಮನಮರಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಏಳು ಗ್ರಾಮಗಳನ್ನು ದೇವದುರ್ಗ ತಾಲೂಕಿನ ಜಾಲಹಳ್ಳಿ ಹೋಬಳಿಯಲ್ಲಿಯೇ ಮುಂದುವರಿಸಬೇಕು ಎಂದು ಒತ್ತಾಯಿಸಿ ವಿವಿಧ ಗ್ರಾಮಗಳ ಮುಖಂಡರು ಹಾಗೂ ಗ್ರಾಮಸ್ಥರು ಶಾಸಕಿ ಕರೆಮ್ಮ ಜಿ. ನಾಯಕ್ ಅವರ ನಿವಾಸಕ್ಕೆ ತೆರಳಿ ಮನವಿ ಪತ್ರ ಸಲ್ಲಿಸಿದರು.

ಗಾಣಧಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಮಲದಿನ್ನಿ, ಕಕ್ಕಲದೊಡ್ಡಿ, ಗಾಣಧಾಳ ಹಾಗೂ ಸೋಮನಮರಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸೋಮನಮರಡಿ, ಬೋಗಿರಾಮನಗುಂಡ, ಸಂಪತರಾಯನದೊಡ್ಡಿ ಮತ್ತು ಮ್ಯಾಕಲದೊಡ್ಡಿ ಗ್ರಾಮಗಳನ್ನು ಅರಕೇರಾ ತಾಲೂಕಿಗೆ ಸೇರ್ಪಡೆಗೊಳಿದ ಸರ್ಕಾರದ ನಿರ್ಧಾರಕ್ಕೆ ಗ್ರಾಮಸ್ಥರು ವಿರೋಧ ವ್ಯಕ್ತಪಡಿಸಿದ್ದಾರೆ.

ಈ ಸಂದರ್ಭದಲ್ಲಿ ಜೆಡಿಎಸ್ ತಾಲೂಕು ಅಧ್ಯಕ್ಷ, ಬಸನಗೌಡ ದೇಸಾಯಿ ಮಾತನಾಡಿ, ಹೊಸ ತಾಲೂಕು ರಚನೆಯ ಸಂದರ್ಭದಲ್ಲಿ ಭೌಗೋಳಿಕ ಅಂತರ, ಜನಸಂಖ್ಯೆ, ಸಾರಿಗೆ ಸಂಪರ್ಕ ಹಾಗೂ ಸಾರ್ವಜನಿಕರಿಗೆ ಆಡಳಿತಾತ್ಮಕವಾಗಿ ದೊರೆಯುವ ಅನುಕೂಲಗಳನ್ನು ಪರಿಗಣಿಸಬೇಕು. ಆದರೆ ಅರಕೇರಾ ತಾಲೂಕು ರಚನೆಯಲ್ಲಿ ಈ ಅಂಶಗಳನ್ನು ಸಮರ್ಪಕವಾಗಿ ಪರಿಗಣಿಸಿಲ್ಲ ಎಂದು ಆರೋಪಿಸಿದರು.

ಅರಕೇರಾ ತಾಲೂಕು ಕೇಂದ್ರದಿಂದ ಕಮಲದಿನ್ನಿ 45 ಕಿ.ಮೀ., ಕಕ್ಕಲದೊಡ್ಡಿ 46 ಕಿ.ಮೀ., ಗಾಣಧಾಳ 50 ಕಿ.ಮೀ., ಬೋಗಿರಾಮನಗುಂಡ 47 ಕಿ.ಮೀ., ಮ್ಯಾಕಲದೊಡ್ಡಿ 45 ಕಿ.ಮೀ., ಸೋಮನಮರಡಿ 46 ಕಿ.ಮೀ. ಹಾಗೂ ಸಂಪತರಾಯನದೊಡ್ಡಿ 51 ಕಿ.ಮೀ. ದೂರದಲ್ಲಿವೆ. ಇದರಿಂದ ಕಂದಾಯ ಹಾಗೂ ಇತರ ಸರ್ಕಾರಿ ಕೆಲಸಗಳಿಗೆ ಸಾರ್ವಜನಿಕರು ದೂರದ ಪ್ರದೇಶಕ್ಕೆ ತೆರಳಬೇಕಾಗುತ್ತದೆ ಎಂದು ತಿಳಿಸಿದರು.

ಆದರೆ ಇದೇ ಗ್ರಾಮಗಳು ಜಾಲಹಳ್ಳಿ ಹೋಬಳಿ ಕೇಂದ್ರದಿಂದ ಕೇವಲ 4.5ರಿಂದ 9 ಕಿ.ಮೀ. ಅಂತರದಲ್ಲಿವೆ. ಜಾಲಹಳ್ಳಿಯಲ್ಲಿ ಸರ್ಕಾರಿ ಹಾಗೂ ಖಾಸಗಿ ಪ್ರಥಮ ದರ್ಜೆ ಕಾಲೇಜುಗಳು, ಪದವಿಪೂರ್ವ ಕಾಲೇಜುಗಳು, ಸಮುದಾಯ ಆರೋಗ್ಯ ಕೇಂದ್ರ, ನಾಡಕಚೇರಿ, ಪೊಲೀಸ್ ಠಾಣೆ, ಪಶು ಚಿಕಿತ್ಸಾಲಯ, ಕೃಷಿ ಕೇಂದ್ರ, ಬ್ಯಾಂಕ್ ಹಾಗೂ ಅಂಚೆ ಕಚೇರಿ ಸೇರಿದಂತೆ ಅಗತ್ಯ ಸೌಲಭ್ಯಗಳು ಲಭ್ಯವಿವೆ. ರಾಜ್ಯ ಹೆದ್ದಾರಿ ಸಂಖ್ಯೆ 61 ಹಾದುಹೋಗಿರುವುದರಿಂದ ಸಾರಿಗೆ ಸಂಪರ್ಕವೂ ಉತ್ತಮವಾಗಿದೆ. ಹೀಗಾಗಿ ಗ್ರಾಮಗಳನ್ನು ಜಾಲಹಳ್ಳಿ ಹೋಬಳಿಯಲ್ಲಿಯೇ ಮುಂದುವರಿಸುವುದು ಸಾರ್ವಜನಿಕರಿಗೆ ಅನುಕೂಲಕರವಾಗಲಿದೆ ಎಂದು ಮನವಿಯಲ್ಲಿ ವಿವರಿಸಲಾಗಿದೆ.

ಗ್ರಾಮಸ್ಥರ ಅಭಿಪ್ರಾಯ ಪಡೆಯದೆ ಆಡಳಿತಾತ್ಮಕ ಗಡಿಗಳನ್ನು ಬದಲಾಯಿಸುವುದರಿಂದ ಶಿಕ್ಷಣ, ಆರೋಗ್ಯ, ವ್ಯಾಪಾರ ಹಾಗೂ ದೈನಂದಿನ ಸರ್ಕಾರಿ ಸೇವೆಗಳನ್ನು ಪಡೆಯಲು ತೊಂದರೆಯಾಗಲಿದೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳ ಮೂಲಕ ಗ್ರಾಮಗಳಲ್ಲಿ ಸಾರ್ವಜನಿಕರ ಅಭಿಪ್ರಾಯ ಸಂಗ್ರಹಿಸಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ ಹಾಗೂ ಕರ್ನಾಟಕ ಭೂಕಂದಾಯ ಕಾಯ್ದೆಯ ಸಂಬಂಧಿತ ನಿಯಮಗಳನ್ನು ಪರಿಶೀಲಿಸಿ ಗ್ರಾಮಗಳನ್ನು ದೇವದುರ್ಗ ತಾಲೂಕಿನ ಜಾಲಹಳ್ಳಿ ಹೋಬಳಿಯಲ್ಲಿಯೇ ಉಳಿಸಬೇಕು ಎಂದು ಆಗ್ರಹಿಸಿದರು.

ಈ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಅಕ್ಟೋಬರ್ 12ರಂದು ಬೃಹತ್ ಪಾದಯಾತ್ರೆ ನಡೆಸಲು ಗ್ರಾಮಸ್ಥರು ನಿರ್ಧರಿಸಿದ್ದಾರೆ. ಕಕ್ಕಲದೊಡ್ಡಿ ಮತ್ತು ಕಮಲದಿನ್ನಿ ಗ್ರಾಮಸ್ಥರು ತಿಮ್ಮಾಪುರದೊಡ್ಡಿ ರಸ್ತೆ ಮೂಲಕ, ಗಾಣಧಾಳ ಹಾಗೂ ಮ್ಯಾಕಲದೊಡ್ಡಿ ಗ್ರಾಮಸ್ಥರು ಮದವಯನಗಡ್ಡಿ ರಸ್ತೆ ಮೂಲಕ ಮತ್ತು ಬೋಗಿರಾಮನಗುಂಡ, ಸೋಮನಮರಡಿ ಹಾಗೂ ಸಂಪತರಾಯನದೊಡ್ಡಿ ಗ್ರಾಮಸ್ಥರು ಬೊಮ್ಮನಹಳ್ಳಿ ರಸ್ತೆ ಮೂಲಕ ಪಾದಯಾತ್ರೆಯಲ್ಲಿ ಆಗಮಿಸಿ ಜಾಲಹಳ್ಳಿ ನಾಡತಹಶೀಲ್ದಾರರ ಕಚೇರಿ ಎದುರು ಬೃಹತ್ ಪ್ರತಿಭಟನೆ ನಡೆಸಲಿದ್ದಾರೆ ಎಂದು ತಿಳಿಸಿದರು.

ಸರ್ಕಾರ ಹಾಗೂ ಜಿಲ್ಲಾಡಳಿತ ಗ್ರಾಮಸ್ಥರ ಬೇಡಿಕೆಯನ್ನು ಗಂಭೀರವಾಗಿ ಪರಿಗಣಿಸಿ ಸೂಕ್ತ ನಿರ್ಧಾರ ಕೈಗೊಳ್ಳಬೇಕು. ಈ ವಿಷಯದಲ್ಲಿ ಶಾಸಕಿ ಕರೆಮ್ಮ ಜಿ. ನಾಯಕ್ ಅವರು ಸರ್ಕಾರದ ಗಮನ ಸೆಳೆದು ಗ್ರಾಮಸ್ಥರಿಗೆ ನ್ಯಾಯ ಒದಗಿಸಬೇಕು ಎಂದು ಮನವಿ ಮಾಡಿದರು.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಜೆಡಿಎಸ್ ತಾಲೂಕು ಅಧ್ಯಕ್ಷ ಬಸನಗೌಡ ದೇಸಾಯಿ ವಕೀಲರು, ಬಸವರಾಜ ಪಾಟೀಲ್ ವಕೀಲರು, ಮಲ್ಲಿಕಾರ್ಜುನ ಬೆನಕನ, ಯಲ್ಲನಗೌಡ ಬೆನಕನ, ಮಲ್ಲಪ್ಪ ಮಲ್ಲಾಪುರ, ಶಿವನಗೌಡ ಪೊಲೀಸ್ ಪಾಟೀಲ್, ರಂಗಮ್ಮ ಸೇರಿದಂತೆ ಹಲವು ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಗದ್ದೆಗಳಿಗೆ ನೀರು ಕೊಡಿ, ಇಲ್ಲವೇ ವಿಷ ಕೊಡಿ: ಕಾಲುವೆ ನೀರಿಗಾಗಿ ರೈತರ ಆಕ್ರೋಶ



ಲಿಂಗಸುಗೂರು: ತಾಲೂಕಿನ ಹಟ್ಟಿ ಚಿನ್ನದ ಗಣಿ ಸಮೀಪದ ಗುರುಗುಂಟಾ ಹೋಬಳಿ ವ್ಯಾಪ್ತಿಯ 7ಬಿ, 7ಎ ಹಾಗೂ ಡಿಐ8 ಕಾಲುವೆಗಳಿಗೆ ಸಮರ್ಪಕವಾಗಿ ನೀರು ಹರಿಸದ ಪರಿಣಾಮ ಭತ್ತದ ಬೆಳೆಗಳು ಒಣಗುತ್ತಿದ್ದು, ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೂಡಲೇ ಕಾಲುವೆಗಳಿಗೆ ನೀರು ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿ ರೈತ ಸಂಘದ ತಾಲೂಕು ಅಧ್ಯಕ್ಷ ದುರ್ಗಾಪ್ರಸಾದ್ ನೇತೃತ್ವದಲ್ಲಿ ರೈತರು ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಗುರುಗುಂಟಾ ಹೋಬಳಿ ವ್ಯಾಪ್ತಿಯ ವಿವಿಧ ಗ್ರಾಮಗಳ ರೈತರು ಸಾವಿರಾರು ರೂಪಾಯಿ ಖರ್ಚು ಮಾಡಿ ಭತ್ತದ ನಾಟಿ ಮಾಡಿದ್ದು, ಬೀಜ, ರಸಗೊಬ್ಬರ, ಕೀಟನಾಶಕ ಹಾಗೂ ಕೃಷಿ ಕೂಲಿ ಸೇರಿದಂತೆ ಸಾಕಷ್ಟು ಹಣ ಹೂಡಿಕೆ ಮಾಡಿದ್ದಾರೆ. ಆದರೆ ಬೆಳೆಗಳಿಗೆ ಅತ್ಯಗತ್ಯವಾಗಿ ಬೇಕಾದ ಸಂದರ್ಭದಲ್ಲಿ ಕಾಲುವೆಗಳಲ್ಲಿ ನೀರು ಹರಿಯದ ಕಾರಣ ಭತ್ತದ ಗದ್ದೆಗಳು ಒಣಗುತ್ತಿವೆ. ಇದರಿಂದ ರೈತರು ಬೆಳೆ ನಷ್ಟದ ಆತಂಕ ಎದುರಿಸುತ್ತಿದ್ದಾರೆ ಎಂದು ದೂರಿದರು.

ಕಾಲುವೆಗಳಿಗೆ ವೈಜ್ಞಾನಿಕ ರೀತಿಯಲ್ಲಿ ಗೇಟ್‌ಗಳನ್ನು ಅಳವಡಿಸಿ ಸಮರ್ಪಕವಾಗಿ ನೀರು ವಿತರಿಸುವ ವ್ಯವಸ್ಥೆ ಮಾಡಿಲ್ಲ. ನೀರಿನ ಸಮಸ್ಯೆ ಕುರಿತು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ಹಲವು ಬಾರಿ ತಂದರೂ ಯಾವುದೇ ಪ್ರಯೋಜನವಾಗಿಲ್ಲ. ಅಧಿಕಾರಿಗಳು ಸಮಸ್ಯೆಗೆ ಸ್ಪಂದಿಸುವ ಬದಲು ಉಡಾಫೆಯ ಉತ್ತರ ನೀಡುತ್ತಿದ್ದಾರೆ ಎಂದು ರೈತರು ಆರೋಪಿಸಿದರು.

ಈ ಕುರಿತು ಮಾತನಾಡಿದ ರೈತ ಸಂಘದ ತಾಲೂಕು ಅಧ್ಯಕ್ಷ ದುರ್ಗಾಪ್ರಸಾದ್, ಕೃಷಿಯನ್ನೇ ನಂಬಿ ಜೀವನ ನಡೆಸುತ್ತಿರುವ ಬಡ ರೈತರು ಬೆಳೆ ಉಳಿಸಿಕೊಳ್ಳಲು ಪರದಾಡುತ್ತಿದ್ದಾರೆ. ಸಾಲ ಮಾಡಿ ಸಾವಿರಾರು ರೂಪಾಯಿ ಬಂಡವಾಳ ಹೂಡಿರುವ ರೈತರಿಗೆ ನೀರಿನ ಕೊರತೆಯಿಂದ ಕೈಗೆ ಬಂದ ಬೆಳೆ ನಾಶವಾಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಇಂತಹ ಸಂದರ್ಭದಲ್ಲಿ ಅಧಿಕಾರಿಗಳು ರೈತರ ಸಂಕಷ್ಟಕ್ಕೆ ಸ್ಪಂದಿಸದಿರುವುದು ಖಂಡನೀಯ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಗದ್ದೆಗಳಿಗೆ ನೀರು ಕೊಡಿ, ಇಲ್ಲವೇ ವಿಷ ಕೊಡಿ ಎಂದು ರೈತರು ತಮ್ಮ ಅಸಹಾಯಕತೆ ಹಾಗೂ ಆಕ್ರೋಶವನ್ನು ವ್ಯಕ್ತಪಡಿಸಿದ್ದು, ಸರ್ಕಾರ ಮತ್ತು ನೀರಾವರಿ ಇಲಾಖೆ ಕೂಡಲೇ ಸಮಸ್ಯೆಯ ಗಂಭೀರತೆಯನ್ನು ಅರಿತು ರೈತರ ನೆರವಿಗೆ ಧಾವಿಸಬೇಕು ಎಂದು ಒತ್ತಾಯಿಸಿದರು.

ಸಂಬಂಧಪಟ್ಟ ಮೇಲಾಧಿಕಾರಿಗಳು ತಕ್ಷಣ ಸ್ಥಳ ಪರಿಶೀಲನೆ ನಡೆಸಿ, ಕಾಲುವೆಗಳಲ್ಲಿ ನೀರು ಹರಿಯದಿರುವ ಕಾರಣ ಪತ್ತೆಹಚ್ಚಬೇಕು. ಅಗತ್ಯವಿರುವ ಕಡೆ ಗೇಟ್‌ಗಳನ್ನು ಸರಿಪಡಿಸಿ, ಎಲ್ಲ ರೈತರ ಜಮೀನುಗಳಿಗೆ ಸಮರ್ಪಕವಾಗಿ ನೀರು ತಲುಪುವಂತೆ ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ರೈತರನ್ನು ಸಂಘಟಿಸಿ ಸಂಬಂಧಪಟ್ಟ ಇಲಾಖೆಯ ಕಚೇರಿ ಎದುರು ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ದುರ್ಗಾಪ್ರಸಾದ್ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ರೈತ ಸಂಘದ ತಾಲೂಕು ಅಧ್ಯಕ್ಷ ದುರ್ಗಾಪ್ರಸಾದ್, ಲಕ್ಷ್ಮೀನಾರಾಯಣ, ಮಲ್ಲು, ಆದಪ್ಪ, ಶಾಹಿದ್ ಅಲಿ, ಬಸವ, ಆದಪ್ಪ ಮೀಸೆ, ಕಮಲ್ ಸಾಬ್ ಸೇರಿದಂತೆ ಇತರ ರೈತರು ಉಪಸ್ಥಿತರಿದ್ದರು.

# ಅ.11ರಿಂದ ಶ್ರೀ ತಾಯಮ್ಮ ದೇವಿಯ ಶರನ್ನವರಾತ್ರಿ ದಸರಾ ಮಹೋತ್ಸವ



ರಾಯಚೂರು, ಅ.10: ನಗರದ ಸರಾಫ್ ಮರ್ಚೆಂಟ್ಸ್ ವೆಲ್ಫೇರ್ ಅಸೋಸಿಯೇಷನ್ ವತಿಯಿಂದ ಸ್ವರ್ಣ ಮಹಲ್‌ನಲ್ಲಿ ಶ್ರೀಮಾತಾ ತಾಯಮ್ಮ ದೇವಿಯ ಶರನ್ನವರಾತ್ರಿ ಹಾಗೂ ದಸರಾ ಮಹೋತ್ಸವವನ್ನು ಅಕ್ಟೋಬರ್ 11ರಿಂದ 21ರವರೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಶ್ರದ್ಧಾಭಕ್ತಿಯಿಂದ ಆಚರಿಸಲಾಗುವುದು ಎಂದು ಸಂಘದ ಅಧ್ಯಕ್ಷ ಗದ್ವಾಲ ನರಸಣ್ಣ ಹಾಗೂ ಕಾರ್ಯದರ್ಶಿ ಕೂರಾ ಅಶೋಕ ತಿಳಿಸಿದ್ದಾರೆ.

ಕಳೆದ 18 ವರ್ಷಗಳಿಂದ ಸಂಘದ ವತಿಯಿಂದ ತಾಯಮ್ಮ ದೇವಿಯ ಸನ್ನಿಧಿಯಲ್ಲಿ ಶರನ್ನವರಾತ್ರಿ ಮಹೋತ್ಸವವನ್ನು ಆಚರಿಸಿಕೊಂಡು ಬರಲಾಗುತ್ತಿದೆ. 2025ರಲ್ಲಿ ನೂತನ ಶಿಲಾ ಮಂಟಪ ನಿರ್ಮಿಸಿ ದೇವಿಯ ಮೂರ್ತಿಯನ್ನು ಅದ್ಧೂರಿಯಾಗಿ ಪುನಃ ಪ್ರತಿಷ್ಠಾಪಿಸಲಾಗಿತ್ತು. ಈ ವರ್ಷವೂ ಲೋಕಕಲ್ಯಾಣ, ಭಕ್ತರ ಸುಖಶಾಂತಿ, ಸಮೃದ್ಧಿ ಹಾಗೂ ಸರ್ವರ ಇಷ್ಟಾರ್ಥ ಸಿದ್ಧಿಗಾಗಿ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಅಕ್ಟೋಬರ್ 11ರಿಂದ 21ರವರೆಗೆ ಪ್ರತಿದಿನ ಬೆಳಿಗ್ಗೆ 7.30ಕ್ಕೆ ಸ್ವರ್ಣ ಮಹಲ್‌ನಲ್ಲಿ ರುದ್ರಾಭಿಷೇಕ, ಪಂಚಾಮೃತ ಅಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ವಿಧಿವಿಧಾನಗಳು ಶಾಸ್ತ್ರೋಕ್ತವಾಗಿ ನಡೆಯಲಿವೆ. ಪೂಜಾ ಕಾರ್ಯಕ್ರಮಗಳ ಅಂಗವಾಗಿ ಭಕ್ತರಿಗೆ ಮಹಾಪ್ರಸಾದ ವಿತರಣೆ ವ್ಯವಸ್ಥೆಯನ್ನೂ ಮಾಡಲಾಗಿದೆ.

ಅದೇ ರೀತಿ ಪ್ರತಿದಿನ ಸಂಜೆ 5 ಗಂಟೆಯಿಂದ ಶ್ರೀಮಾತಾ ಅಪ್ಪಾಜಿ ಮಹಿಳಾ ಮಂಡಳಿಯ ವತಿಯಿಂದ ಶ್ರೀ ಲಲಿತಾ ಸಹಸ್ರನಾಮಾವಳಿ ಹಾಗೂ ಶ್ರೀದೇವಿ ಕವಚ ಪಾರಾಯಣ ಕಾರ್ಯಕ್ರಮಗಳು ನಡೆಯಲಿವೆ. ನವರಾತ್ರಿ ಮಹೋತ್ಸವದ ಅಂಗವಾಗಿ ದೇವಿಗೆ ವಿಶೇಷ ಪೂಜೆ ಸಲ್ಲಿಸಿ, ಭಕ್ತರ ಒಳಿತಿಗಾಗಿ ಪ್ರಾರ್ಥನೆ ನಡೆಸಲಾಗುವುದು.

ನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳ ಭಕ್ತರು ಮತ್ತು ಸಾರ್ವಜನಿಕರು ಕುಟುಂಬ ಸಮೇತರಾಗಿ ಆಗಮಿಸಿ ಶ್ರೀ ತಾಯಮ್ಮ ದೇವಿಯ ದರ್ಶನ ಪಡೆದು, ವಿಶೇಷ ಪೂಜಾ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಬೇಕು ಎಂದು ಸರಾಫ್ ಮರ್ಚೆಂಟ್ಸ್ ವೆಲ್ಫೇರ್ ಅಸೋಸಿಯೇಷನ್ ಅಧ್ಯಕ್ಷ ಗದ್ವಾಲ ನರಸಣ್ಣ, ಕಾರ್ಯದರ್ಶಿ ಕೂರಾ ಅಶೋಕ ಹಾಗೂ ಸಂಘದ ಪದಾಧಿಕಾರಿಗಳು ಮನವಿ ಮಾಡಿದ್ದಾರೆ.

# ಅಂಬೇಡ್ಕರ್ ಅವರ ಸಾಮಾಜಿಕ ಮತ್ತು ಸಾಂಸ್ಕೃತಿಕ ಚಿಂತನೆಗಳ ಕುರಿತು ಅಧ್ಯಯನ ಶಿಬಿರ



ಮಾನ್ವಿ: ತಾಲೂಕಿನ ಪೋತ್ನಾಳ ಪಟ್ಟಣದ ವಿಮುಕ್ತಿ ಚಾರಿಟೇಬಲ್ ಟ್ರಸ್ಟ್ ಆವರಣದಲ್ಲಿ ಬಹುಜನ ಸಂಘರ್ಷ ಸಮಿತಿ ಕರ್ನಾಟಕ ಹಾಗೂ ಜನತಾ ಸಾಮಾಜಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ ಬಲ್ಲಟಗಿ ಇವರ ಸಹಯೋಗದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ ದೃಷ್ಟಿಯಲ್ಲಿ ಸಾಮಾಜಿಕ ಮತ್ತು ಸಾಂಸ್ಕೃತಿಕ ಚಿಂತನೆಗಳು ಎಂಬ ವಿಷಯದ ಕುರಿತು ರಾಯಚೂರು ಜಿಲ್ಲಾಮಟ್ಟದ ಮೂರು ದಿನಗಳ ಅಧ್ಯಯನ ಶಿಬಿರಕ್ಕೆ ಚಾಲನೆ ನೀಡಲಾಯಿತು.

ಪೂಜ್ಯ ಕೊರಣೇಶ್ವರ ಸ್ವಾಮೀಜಿ ಹಾಗೂ ಉಚ್ಚಮಠದ ಪೂಜ್ಯ ಬಸವರಾಜ ತಾತನವರು ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಮಾಲೆ ಅರ್ಪಿಸುವ ಮೂಲಕ ಶಿಬಿರವನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕೊರಣೇಶ್ವರ ಸ್ವಾಮೀಜಿ, 12ನೇ ಶತಮಾನದಲ್ಲಿ ಬಸವಣ್ಣನವರು ಸಮಾಜದಲ್ಲಿ ತುಳಿತಕ್ಕೊಳಗಾದವರು, ದುಡಿಯುವ ವರ್ಗ, ಮಹಿಳೆಯರು ಹಾಗೂ ಕಾರ್ಮಿಕರನ್ನು ಒಗ್ಗೂಡಿಸಿ ಸಮಾನತೆಯ ಸಮಾಜ ನಿರ್ಮಾಣಕ್ಕೆ ಶ್ರಮಿಸಿದರು. ಜಾತಿ, ವರ್ಗ ಮತ್ತು ಲಿಂಗ ತಾರತಮ್ಯದ ವಿರುದ್ಧ ಧ್ವನಿ ಎತ್ತುವ ಮೂಲಕ ಸಾಮಾಜಿಕ ಪರಿವರ್ತನೆಗೆ ನಾಂದಿ ಹಾಡಿದರು. ಅವರ ಸಮಾನತೆಯ ಚಿಂತನೆಗಳಿಂದಾಗಿ ಬಸವಣ್ಣನವರನ್ನು ದಕ್ಷಿಣ ಭಾರತದ ಬುದ್ಧ ಎಂದು ಕರೆಯಲಾಗುತ್ತದೆ ಎಂದು ಹೇಳಿದರು.

ಸಮಾಜದಲ್ಲಿ ಸಮಾನತೆ, ಸಹೋದರತ್ವ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸುವಲ್ಲಿ ಮಹಾತ್ಮ ಬುದ್ಧ, ಬಸವಣ್ಣ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಚಿಂತನೆಗಳು ಮಹತ್ವದ ಪಾತ್ರ ವಹಿಸಿವೆ. ಇಂತಹ ಮಹನೀಯರ ವಿಚಾರಧಾರೆಗಳನ್ನು ಅಧ್ಯಯನ ಮಾಡುವುದರ ಜೊತೆಗೆ ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಅಗತ್ಯವಾಗಿದೆ ಎಂದು ತಿಳಿಸಿದರು.

ಮೂರು ದಿನಗಳ ಅಧ್ಯಯನ ಶಿಬಿರದಲ್ಲಿ ವಿವಿಧ ಕ್ಷೇತ್ರಗಳ ಚಿಂತಕರು, ವಿದ್ವಾಂಸರು ಹಾಗೂ ಸಂಪನ್ಮೂಲ ವ್ಯಕ್ತಿಗಳು ಭಾಗವಹಿಸಿ ಸಾಮಾಜಿಕ ನ್ಯಾಯ, ಸಮಾನತೆ ಮತ್ತು ಸಾಂಸ್ಕೃತಿಕ ಚಿಂತನೆಗಳ ಕುರಿತು ವಿಚಾರಗಳನ್ನು ಹಂಚಿಕೊಳ್ಳಲಿದ್ದಾರೆ. ಶಿಬಿರಾರ್ಥಿಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಸಮಾಜದ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಉಚ್ಚಮಠದ ಪೀಠಾಧಿಪತಿ ಬಸವರಾಜ ತಾತನವರು, ಬಾಲಸ್ವಾಮಿ ಕೊಡ್ಲಿ, ಎಂ.ಆರ್. ಬೇರಿ, ಸಂಪತ್ ರಾಜ್ ಜಾಗಿರಪ್ಪನೂರು, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಮಾನ್ವಿ ತಾಲೂಕು ಅಧ್ಯಕ್ಷ ಅಶೋಕ್ ತಡಕಲ್, ಡಾ. ಹುಸೇನಪ್ಪ ಅಮರಾಪುರ, ಮೈಕಲ್ ಉದ್ಬಾಳ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಹಾಗೂ ಶಿಬಿರಾರ್ಥಿಗಳು ಭಾಗವಹಿಸಿದ್ದರು.

# ಹಿರೇಕೋಟ್ನೆಕಲ್‌ನಲ್ಲಿ ಇಂದು ನೂತನ ಶ್ರೀದೇವಿ ಪುರಾಣ ಮಂಟಪ ಉದ್ಘಾಟನೆ



ಮಾನ್ವಿ, ಅ.10: ತಾಲೂಕಿನ ಹಿರೇಕೋಟ್ನೆಕಲ್ ಗ್ರಾಮದ ಶ್ರೀ ತಾಯಮ್ಮದೇವಿ ದೇವಸ್ಥಾನದಲ್ಲಿ ದಸರಾ ಮಹೋತ್ಸವದ ಅಂಗವಾಗಿ ಅ. 11ರಿಂದ 21ರವರೆಗೆ 45ನೇ ವರ್ಷದ ಶ್ರೀದೇವಿ ಪುರಾಣ ಪ್ರವಚನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಇದೇ ಸಂದರ್ಭದಲ್ಲಿ ಸುಮಾರು 10 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಿರುವ ನೂತನ ಶ್ರೀದೇವಿ ಪುರಾಣ ಮಂಟಪವನ್ನು ಅ.11ರಂದು ಉದ್ಘಾಟಿಸಲಾಗುವುದು ಎಂದು ಹಿರಿಯ ವಕೀಲ ಸಿದ್ದಲಿಂಗಪ್ಪ ಚಿಕ್ಕಕೋಟ್ನೆಕಲ್ ತಿಳಿಸಿದ್ದಾರೆ.

ಗ್ರಾಮದಲ್ಲಿ ಹಲವು ದಶಕಗಳಿಂದ ನಡೆದುಕೊಂಡು ಬರುತ್ತಿರುವ ಶ್ರೀದೇವಿ ಪುರಾಣ ಪ್ರವಚನವು ಈ ವರ್ಷ 45ನೇ ವರ್ಷಕ್ಕೆ ಕಾಲಿಡುತ್ತಿದೆ. ಈ ಹಿನ್ನೆಲೆಯಲ್ಲಿ ಭಕ್ತರಿಗೆ ಅನುಕೂಲವಾಗುವಂತೆ ಹಿರಿಯ ವಕೀಲ ಸಿದ್ದಲಿಂಗಪ್ಪ ಚಿಕ್ಕಕೋಟ್ನೆಕಲ್ ಅವರು 10 ಲಕ್ಷ ರೂ. ವೆಚ್ಚದಲ್ಲಿ ನೂತನ ಪುರಾಣ ಮಂಟಪ ನಿರ್ಮಿಸಿದ್ದಾರೆ.

ಅ. 11ರಂದು ಮಂಟಪದ ಉದ್ಘಾಟನೆಯೊಂದಿಗೆ ಶ್ರೀ ತಾಯಮ್ಮದೇವಿಗೆ ವಿಶೇಷ ರುದ್ರಾಭಿಷೇಕ ಹಾಗೂ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ. ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಒಳಬಳ್ಳಾರಿಯ ಸುವರ್ಣಗಿರಿ ಮಠದ ಶ್ರೀ ಸಿದ್ದಲಿಂಗ ಮಹಾಸ್ವಾಮಿಗಳು, ಯದ್ದಲದೊಡ್ಡಿಯ ಶ್ರೀ ಮಹಾಲಿಂಗ ಸ್ವಾಮಿಗಳು, ಕರೆಗುಡ್ಡದ ಶ್ರೀ ಮಹಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು, ಚೀಕಲಪರ್ವಿಯ ಶ್ರೀ ಸದಾಶಿವ ಮಹಾಸ್ವಾಮಿಗಳು ಹಾಗೂ ಅಡವಿ ಅಮರೇಶ್ವರ ಮಠದ ಶ್ರೀ ತೋಂಟದಾರ್ಯ ಮಹಾಸ್ವಾಮಿಗಳು ವಹಿಸಲಿದ್ದಾರೆ.

ದಸರಾ ಮಹೋತ್ಸವದ ಅಂಗವಾಗಿ ಅಕ್ಟೋಬರ್ 11ರಿಂದ 21ರವರೆಗೆ ಪ್ರತಿದಿನ ಸಂಜೆ 7ರಿಂದ ರಾತ್ರಿ 9.30ರವರೆಗೆ ಕಲ್ಲೂರಿನ ಶ್ರೀ ಕಲ್ಲಿನಾಥ ಶಾಸ್ತ್ರಿಗಳು ಶ್ರೀದೇವಿ ಪುರಾಣ ಪ್ರವಚನ ನೀಡಲಿದ್ದಾರೆ. ಪುರಾಣ ಪ್ರವಚನದ ಮೂಲಕ ದೇವಿಯ ಮಹಿಮೆ, ಧಾರ್ಮಿಕ ಪರಂಪರೆ ಹಾಗೂ ಜೀವನ ಮೌಲ್ಯಗಳ ಕುರಿತು ಭಕ್ತರಿಗೆ ತಿಳಿಸಿಕೊಡಲಾಗುವುದು.

ಗ್ರಾಮ ಹಾಗೂ ಸುತ್ತಮುತ್ತಲಿನ ಪ್ರದೇಶಗಳ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ನೂತನ ಮಂಟಪದ ಉದ್ಘಾಟನೆ, ರುದ್ರಾಭಿಷೇಕ ಮತ್ತು ಪುರಾಣ ಪ್ರವಚನ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು ಎಂದು ಶ್ರೀ ತಾಯಮ್ಮದೇವಿ ದೇವಸ್ಥಾನ ಸಮಿತಿ ಹಾಗೂ ಹಿರಿಯ ವಕೀಲ ಸಿದ್ದಲಿಂಗಪ್ಪ ಚಿಕ್ಕಕೋಟ್ನೆಕಲ್ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ಕಾಲುವೆ ನೀರಿಗಾಗಿ ರೈತರ ರಸ್ತೆ ತಡೆ ಪ್ರತಿಭಟನೆ: ಅಧಿಕಾರಿಗಳ ಭರವಸೆ ಬಳಿಕ ಹೋರಾಟ ವಾಪಸ್



ದೇವದುರ್ಗ: ನಾರಾಯಣಪುರ ಬಲದಂಡೆ ಕಾಲುವೆಯ 16, 17 ಹಾಗೂ 18ನೇ ವಿತರಣಾ ಕಾಲುವೆಗಳಿಗೆ ಸಮರ್ಪಕವಾಗಿ ನೀರು ಹರಿಸುವಂತೆ ಆಗ್ರಹಿಸಿ ಕಳೆದ 15 ದಿನಗಳಿಂದ ಹೋರಾಟ ನಡೆಸುತ್ತಿದ್ದ ರೈತರು, ಸೋಮವಾರ ಗಬ್ಬೂರುದೇವದುರ್ಗ ಮುಖ್ಯರಸ್ತೆ ತಡೆದು ಪ್ರತಿಭಟನೆ ನಡೆಸಿದರು. ನೀರಾವರಿ ಇಲಾಖೆ ಅಧಿಕಾರಿಗಳು ನೀರಿನ ಹರಿವು ಹೆಚ್ಚಿಸಿ ಕೊನೆಯ ಭಾಗದ ರೈತರಿಗೂ ನೀರು ತಲುಪಿಸುವ ಭರವಸೆ ನೀಡಿದ ಹಿನ್ನೆಲೆಯಲ್ಲಿ ಪ್ರತಿಭಟನೆಯನ್ನು ತಾತ್ಕಾಲಿಕವಾಗಿ ಹಿಂಪಡೆಯಲಾಯಿತು.

ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷರ ನೇತೃತ್ವದಲ್ಲಿ ಸಂಕೇಶ್ವರ ಹಾಳ್ ಗ್ರಾಮದ ಬಸವಣ್ಣ ಕ್ಯಾಂಪ್ ಸಮೀಪದ 17ನೇ ಉಪಕಾಲುವೆ ಬಳಿ ಜಮಾಯಿಸಿದ ರೈತರು, ಮುಖ್ಯರಸ್ತೆಯಲ್ಲಿ ಸಂಚಾರ ತಡೆದು ನೀರಾವರಿ ಇಲಾಖೆ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಕಾಲುವೆಯ ಮೇಲ್ಭಾಗದಲ್ಲಿ ನೀರು ಹರಿಯುತ್ತಿದ್ದರೂ ಕೊನೆಯ ಭಾಗದ ಜಮೀನುಗಳಿಗೆ ನೀರು ತಲುಪುತ್ತಿಲ್ಲ. ಇದರಿಂದ ಬೆಳೆಗಳು ಒಣಗುವ ಹಂತಕ್ಕೆ ಬಂದಿದ್ದು, ಸಾವಿರಾರು ರೂಪಾಯಿ ಬಂಡವಾಳ ಹೂಡಿರುವ ರೈತರು ನಷ್ಟದ ಆತಂಕ ಎದುರಿಸುತ್ತಿದ್ದಾರೆ. ಸಮಸ್ಯೆ ಕುರಿತು ಹಲವು ಬಾರಿ ಅಧಿಕಾರಿಗಳ ಗಮನಕ್ಕೆ ತಂದರೂ ಸೂಕ್ತ ಕ್ರಮ ಕೈಗೊಂಡಿಲ್ಲ ಎಂದು ಪ್ರತಿಭಟನಾಕಾರರು ದೂರಿದರು.

ರೈತರ ಹೋರಾಟದ ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ನೀರಾವರಿ ಇಲಾಖೆಯ ಕಾರ್ಯನಿರ್ವಾಹಕ ಎಂಜಿನಿಯರ್ ಮಂಜುನಾಥ್ ಹಲಗೇರ್ ಹಾಗೂ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ರೈತರೊಂದಿಗೆ ಮಾತುಕತೆ ನಡೆಸಿದರು. ಈ ವೇಳೆ ಅಧೀಕ್ಷಕ ಎಂಜಿನಿಯರ್ ಅವರೊಂದಿಗೆ ದೂರವಾಣಿ ಮೂಲಕ ಚರ್ಚಿಸಿ, ಕಾಲುವೆಯಲ್ಲಿ ಈವರೆಗೆ 2,400 ಕ್ಯೂಸೆಕ್ ಇದ್ದ ನೀರಿನ ಹರಿವನ್ನು 2,750 ಕ್ಯೂಸೆಕ್‌ಗೆ ಹೆಚ್ಚಿಸಿರುವುದಾಗಿ ತಿಳಿಸಿದರು.

ಮಂಗಳವಾರ ಬೆಳಿಗ್ಗೆ 10 ಗಂಟೆಯೊಳಗೆ ಕಾಲುವೆಯಲ್ಲಿ ನಿಗದಿತ ಗೇಜ್ ಕಾಯ್ದುಕೊಂಡು ಕೊನೆಯ ಭಾಗದ ರೈತರ ಜಮೀನುಗಳಿಗೂ ನೀರು ತಲುಪಿಸುವುದಾಗಿ ಅಧಿಕಾರಿಗಳು ಭರವಸೆ ನೀಡಿದರು. ಇದಕ್ಕೆ ಸ್ಪಂದಿಸಿದ ರೈತರು ರಸ್ತೆ ತಡೆ ಹೋರಾಟವನ್ನು ತಾತ್ಕಾಲಿಕವಾಗಿ ಕೈಬಿಟ್ಟರು.

ಆದರೆ ನಿಗದಿತ ಸಮಯದೊಳಗೆ ಸಮರ್ಪಕವಾಗಿ ನೀರು ಹರಿಸದಿದ್ದರೆ ಮತ್ತೆ ರಸ್ತೆಗಿಳಿದು ತೀವ್ರ ಹೋರಾಟ ನಡೆಸಬೇಕಾಗುತ್ತದೆ. ಬೆಳೆ ಉಳಿಸಿಕೊಳ್ಳಲು ನೀರು ಕೇಳುತ್ತಿರುವ ರೈತರ ಸಮಸ್ಯೆಯನ್ನು ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಬೇಕು ಎಂದು ಪ್ರತಿಭಟನಾಕಾರರು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಪ್ರಭಾಕರ್ ಪಾಟೀಲ್, ಇಂಗಳದಾಳ್ ರಮೇಶ್, ಅಬಕಾರಿ ಶರಣಪ್ಪ, ಹುಸೇನಪುರದ ಉಮ್ಮಣ್ಣ ನಾಯಕ್, ಮಲ್ಲಪ್ಪಗೌಡ, ಮಲ್ಲಪ್ಪ ಪೂಜಾರಿ, ಹುಚ್ಚ ಪೀರ್ ಸಾಬ್, ಶರಬಣ್ಣ ಸಾಹುಕಾರ್ ಸೇರಿದಂತೆ ಇಂಗಳದಾಳ, ಬೂದಿನಾಳ, ಹದ್ದಿನಾಳ, ಸಂಕೇಶ್ವರ ಹಾಳ್, ಜಿನ್ನಾಪುರ, ಕೂಡ್ಲಿಗಿ, ಗಬ್ಬೂರು, ಮಲದಕಲ್ ಹಾಗೂ ಸುತ್ತಮುತ್ತಲಿನ ಗ್ರಾಮಗಳ ರೈತರು ಭಾಗವಹಿಸಿದ್ದರು. ಗಬ್ಬೂರು ಪೊಲೀಸ್ ಇನ್‌ಸ್ಪೆಕ್ಟರ್ ಸ್ಥಳದಲ್ಲಿ ಉಪಸ್ಥಿತರಿದ್ದರು.

# ಲಿಂಗಸುಗೂರು ಕ್ಷೇತ್ರದ 6 ಜಿ.ಪಂ., 22 ತಾ.ಪಂ. ಕ್ಷೇತ್ರಗಳ ಕರಡು ಮೀಸಲಾತಿ ಪಟ್ಟಿ ಪ್ರಕಟ

ಲಿಂಗಸುಗೂರು: ಲಿಂಗಸುಗೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ 6 ಜಿಲ್ಲಾ ಪಂಚಾಯಿತಿ ಹಾಗೂ 22 ತಾಲೂಕು ಪಂಚಾಯಿತಿ ಕ್ಷೇತ್ರಗಳಿಗೆ ಸಂಬಂಧಿಸಿದ ಕರಡು ಮೀಸಲಾತಿ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ವಿವಿಧ ವರ್ಗಗಳಿಗೆ ಕ್ಷೇತ್ರವಾರು ಮೀಸಲಾತಿ ನಿಗದಿಪಡಿಸಲಾಗಿದೆ.

ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ನಾಗಲಾಪುರ ಕ್ಷೇತ್ರವನ್ನು ಸಾಮಾನ್ಯ ಮಹಿಳೆ, ಮಾವಿನಭಾವಿ ಸಾಮಾನ್ಯ, ಆನೆಹೊಸೂರು ಪರಿಶಿಷ್ಟ ಜಾತಿ ಮಹಿಳೆ, ದೇವರಭೂಪುರ ಸಾಮಾನ್ಯ, ಗುರುಗುಂಟಾ ಪರಿಶಿಷ್ಟ ಪಂಗಡ ಮಹಿಳೆ ಹಾಗೂ ಗೆಜ್ಜಲಗಟ್ಟಾ ಕ್ಷೇತ್ರವನ್ನು ಸಾಮಾನ್ಯ ವರ್ಗಕ್ಕೆ ಮೀಸಲಿರಿಸಲಾಗಿದೆ.

ಅದೇ ರೀತಿ ತಾಲೂಕು ಪಂಚಾಯಿತಿ ವ್ಯಾಪ್ತಿಯ 22 ಕ್ಷೇತ್ರಗಳಿಗೂ ಕರಡು ಮೀಸಲಾತಿ ಪ್ರಕಟಿಸಲಾಗಿದೆ. ನಾಗಲಾಪುರ ಸಾಮಾನ್ಯ ಮಹಿಳೆ, ಹೂನೂರು ಸಾಮಾನ್ಯ, ಆಮದಿಹಾಳ ಪರಿಶಿಷ್ಟ ಜಾತಿ ಮಹಿಳೆ, ಬನ್ನಿಗೋಳ ಸಾಮಾನ್ಯ, ಮಾವಿನಭಾವಿ ಸಾಮಾನ್ಯ, ಖೈರವಾಡಗಿ ಪರಿಶಿಷ್ಟ ಜಾತಿ ಮಹಿಳೆ, ನಾಗರಹಾಳ ಸಾಮಾನ್ಯ ಮಹಿಳೆ, ನರಕಲದಿನ್ನಿ ಸಾಮಾನ್ಯ ಮಹಿಳೆ ಹಾಗೂ ಆನೆಹೊಸೂರು ಕ್ಷೇತ್ರವನ್ನು ಸಾಮಾನ್ಯ ಮಹಿಳೆಗೆ ಮೀಸಲಿಡಲಾಗಿದೆ.

ಈಚನಾಳ ಪರಿಶಿಷ್ಟ ಜಾತಿ, ರೋಡಲಬಂಡಾ (ಯು) ಸಾಮಾನ್ಯ, ಗೋರೆಬಾಳ ಪರಿಶಿಷ್ಟ ಜಾತಿ ಮಹಿಳೆ, ಪೂಲಭಾವಿ ಪರಿಶಿಷ್ಟ ಜಾತಿ, ಗುಂತಗೋಳ ಪರಿಶಿಷ್ಟ ಪಂಗಡ ಮಹಿಳೆ, ಹೊನ್ನಳ್ಳಿ ಪರಿಶಿಷ್ಟ ಪಂಗಡ, ಗುರುಗುಂಟಾ ಪರಿಶಿಷ್ಟ ಪಂಗಡ ಮಹಿಳೆ, ಪೈದೊಡ್ಡಿ ಪರಿಶಿಷ್ಟ ಪಂಗಡ ಹಾಗೂ ಗೌಡೂರು ಕ್ಷೇತ್ರವನ್ನು ಪರಿಶಿಷ್ಟ ಪಂಗಡಕ್ಕೆ ಮೀಸಲಿರಿಸಲಾಗಿದೆ.

ಗೆಜ್ಜಲಗಟ್ಟಾ ಕ್ಷೇತ್ರವನ್ನು ಹಿಂದುಳಿದ ವರ್ಗ 'ಅ' ಮಹಿಳೆ, ಅನ್ವರಿ ಸಾಮಾನ್ಯ, ಕೋಠಾ ಸಾಮಾನ್ಯ ಹಾಗೂ ರೋಡಲಬಂಡಾ (ತ) ಕ್ಷೇತ್ರವನ್ನು ಸಾಮಾನ್ಯ ವರ್ಗಕ್ಕೆ ಮೀಸಲಿಡಲಾಗಿದೆ.

ತಾಲೂಕು ಪಂಚಾಯಿತಿಯ ಒಟ್ಟು 22 ಕ್ಷೇತ್ರಗಳ ಪೈಕಿ ಸಾಮಾನ್ಯ ವರ್ಗಕ್ಕೆ 7, ಸಾಮಾನ್ಯ ಮಹಿಳೆಯರಿಗೆ 4, ಪರಿಶಿಷ್ಟ ಜಾತಿ ಮಹಿಳೆಯರಿಗೆ 3, ಪರಿಶಿಷ್ಟ ಜಾತಿಗೆ 2, ಪರಿಶಿಷ್ಟ ಪಂಗಡ ಮಹಿಳೆಯರಿಗೆ 3, ಪರಿಶಿಷ್ಟ ಪಂಗಡಕ್ಕೆ 2 ಹಾಗೂ ಹಿಂದುಳಿದ ವರ್ಗ 'ಅ' ಮಹಿಳೆಗೆ ಒಂದು ಕ್ಷೇತ್ರ ಮೀಸಲಾಗಿದೆ.

ಜಿಲ್ಲಾ ಹಾಗೂ ತಾಲೂಕು ಪಂಚಾಯಿತಿ ಕ್ಷೇತ್ರಗಳ ಕರಡು ಮೀಸಲಾತಿ ಪಟ್ಟಿ ಪ್ರಕಟವಾಗಿರುವ ಹಿನ್ನೆಲೆಯಲ್ಲಿ ಸ್ಥಳೀಯ ರಾಜಕೀಯ ವಲಯದಲ್ಲಿ ಮುಂದಿನ ಚುನಾವಣೆಯ ಸಿದ್ಧತೆ ಹಾಗೂ ಕ್ಷೇತ್ರವಾರು ಮೀಸಲಾತಿ ಕುರಿತು ಚರ್ಚೆ ಆರಂಭವಾಗಿದೆ.

# ಸಾಮಾನ್ಯ ಶಸ್ತ್ರಚಿಕಿತ್ಸೆ ಕುರಿತು ಅ.11ರಂದು ನವೋದಯ ಎಫ್‌ಎಂನಲ್ಲಿ ನೇರ ಫೋನ್ ಇನ್ ಕಾರ್ಯಕ್ರಮ



ರಾಯಚೂರು, ಅ.10: ನಗರದ ನವೋದಯ ಶಿಕ್ಷಣ ಸಂಸ್ಥೆಯ ನವೋದಯ ಎಫ್‌ಎಂ 88.4 ಕೇಂದ್ರದ ವತಿಯಿಂದ ಸಾಮಾನ್ಯ ಶಸ್ತ್ರಚಿಕಿತ್ಸೆ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡುವ ಉದ್ದೇಶದಿಂದ ಅಕ್ಟೋಬರ್ 11ರಂದು ಬೆಳಿಗ್ಗೆ 9ರಿಂದ 10 ಗಂಟೆಯವರೆಗೆ ನೇರ ಫೋನ್ ಇನ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ನವೋದಯ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ಸಾಮಾನ್ಯ ಶಸ್ತ್ರಚಿಕಿತ್ಸೆ ವಿಭಾಗದ ಪ್ರಾಧ್ಯಾಪಕರು ಹಾಗೂ ಮುಖ್ಯಸ್ಥರಾದ ಡಾ. ರಾಜೇಶ ಕಕ್ಕೇರಿ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಸಾಮಾನ್ಯ ಶಸ್ತ್ರಚಿಕಿತ್ಸೆಗೆ ಸಂಬಂಧಿಸಿದ ಆರೋಗ್ಯ ಸಮಸ್ಯೆಗಳು, ಶಸ್ತ್ರಚಿಕಿತ್ಸೆಯ ಅಗತ್ಯತೆ, ಆಧುನಿಕ ಚಿಕಿತ್ಸಾ ವಿಧಾನಗಳು ಹಾಗೂ ಶಸ್ತ್ರಚಿಕಿತ್ಸೆಗೆ ಮುನ್ನ ಮತ್ತು ನಂತರ ಅನುಸರಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಮಾಹಿತಿ ನೀಡಲಿದ್ದಾರೆ. ಶಸ್ತ್ರಚಿಕಿತ್ಸೆ ಬಗ್ಗೆ ಸಾರ್ವಜನಿಕರಲ್ಲಿ ಇರುವ ಅನುಮಾನಗಳು ಮತ್ತು ಆತಂಕಗಳನ್ನು ನಿವಾರಿಸುವ ನಿಟ್ಟಿನಲ್ಲಿ ಕೇಳುಗರ ಪ್ರಶ್ನೆಗಳಿಗೆ ಉತ್ತರಿಸಲಿದ್ದಾರೆ.

ಸಾರ್ವಜನಿಕರು ಕಾರ್ಯಕ್ರಮದ ಅವಧಿಯಲ್ಲಿ ನೇರವಾಗಿ ದೂರವಾಣಿ ಕರೆ ಮಾಡಿ ಸಾಮಾನ್ಯ ಶಸ್ತ್ರಚಿಕಿತ್ಸೆಗೆ ಸಂಬಂಧಿಸಿದ ತಮ್ಮ ಸಂದೇಹಗಳಿಗೆ ತಜ್ಞ ವೈದ್ಯರಿಂದ ಮಾಹಿತಿ ಪಡೆದುಕೊಳ್ಳಬಹುದು. ಕಾರ್ಯಕ್ರಮದಲ್ಲಿ ಭಾಗವಹಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ 91879 69142 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ.

ಆರೋಗ್ಯದ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಆಯೋಜಿಸಿರುವ ಈ ಕಾರ್ಯಕ್ರಮವನ್ನು ಸಾರ್ವಜನಿಕರು ಆಲಿಸಿ ಸದುಪಯೋಗ ಪಡೆದುಕೊಳ್ಳಬೇಕು ಎಂದು ನವೋದಯ ಎಫ್‌ಎಂ ಕೇಂದ್ರದ ಮುಖ್ಯಸ್ಥ ಅಮರೇಶ ಆಶಿಹಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K